# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 67 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 26–09–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 67 | RNI No: KARKAN/2023/88462 | Chitradurga | Date: 26-09-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿ 2

ತಂಬಾಕು ಕಾನೂನು ಬಾಹಿರ ಮಾರಾಟದ ವಿರುದ್ಧ ಕ್ರಮವಾಗಲಿ; ನ್ಯಾ.ಮಹಾವೀರ್ 3

7ನೇ ವೇತನ ಆಯೋಗ ಜಾರಿಯಲ್ಲಿ ನಿವೃತ್ತ ನೌಕರರಿಗೆ ಅನ್ಯಾಯ: ಪ್ರತಿಭಟನೆಗೆ ಸಜ್ಜು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹಿಂದೂ ಮಹಾ ಗಣಪತಿ ವಿಸರ್ಜನೆ: ಕಟ್ಟಡದ ಮೇಲೆ ಹತ್ತದಂತೆ ಜನರಿಗೆ ಸೂಚನೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯಲ್ಲಿ ಸ್ಥಾಪನೆ ಮಾಡಲಾಗಿರುವ ಹಿಂದೂ ಮಹಾಗಣಪತಿಯ ವಿಸರ್ಜನಾಮೆರವಣಿಗೆಹಾಗೂಶೋಭಯಾತ್ರೆಯು ಇದೇ ಸೆ.28ರಂದು ನಡೆಯಲಿದ್ದು, ಈ ಸಮಯದಲ್ಲಿ ಸಾರ್ವಜನಿಕರು ಕಟ್ಟಡದ ಮೇಲೆ ಹತ್ತದಂತೆ ಬೆಸ್ಕಾಂ ಸೂಚನೆ ನೀಡಿದೆ. ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆಯು ಚಳ್ಳಕೆರೆ ಗೇಟ್‌ನಿಂದ ಬಿ.ಡಿ.ರಸ್ತೆ, ಗಾಂಧಿ ವೃತ್ತದ ಮೂಲಕ ಹೊಳಲ್ಕೆರೆ ರಸ್ತೆಯ ಮುಖಾಂತರ ಚಂದ್ರವಳ್ಳಿ ತೋಟಕ್ಕೆ ಸಾಗಲಿರುವ ಮಾರ್ಗದಲ್ಲಿ ಹಾಗೂ ಸುತ್ತ–ಮುತ್ತ ಇರುವ ಅಂಗಡಿ ಮಳಿಗೆಗಳ ಮೇಲೆ ಸಾರ್ವಜನಿಕರು ಹತ್ತದಂತೆ ಅಂಗಡಿಗಳ ಮಾಲೀಕರು ನಿಗಾವಹಿಸಬೇಕು. ಒಂದು ವೇಳೆ ಸಾರ್ವಜನಿಕರು ಅಂಗಡಿಗಳ ಮೇಲೆ ಹತ್ತಿ ಯಾವುದೇ ಅಹಿತಕರ ಘಟನೆಗಳು ಸಂಭವಿಸಿದಲ್ಲಿ ಅದರಿಂದಾಗುವ ಆಗುಹೋಗುಗಳಿಗೆ ಅಂಗಡಿ ಮಾಲೀಕರೇ ನೇರ ಹೊಣೆಗಾರರು ಎಂದು ಬೆಸ್ಕಾಂ ಚಿತ್ರದುರ್ಗ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಚಿತ ಸೀಳು ತುಟಿ ಮತ್ತು ಅಂಗುಲಿನ ಶಸ್ತ್ರ ಚಿತಕಿತ್ಸೆ

» ಚಿತ್ರದುರ್ಗ

ಎಸ್‌ಎಸ್‌ಕೆ & ಎಬಿಎಂಎಸ್‌ಎಸ್ ಸಹಯೋಗದಲ್ಲಿ ಅಗತ್ಯವಿರುವ ಮಕ್ಕಳಿಗೆ ಉಚಿತವಾಗಿ ಸೀಳು ತುಟಿ ಮತ್ತು ಅಂಗುಲಿನ ಶಸ್ತ ಚಿಕಿತ್ಸೆ ನಡೆಸಲಾಗುವುದು. ಚಿತ್ರದುರ್ಗ ತಾಲ್ಲೂಕಿನ 1 ರಿಂದ 12ನೇ ತರಗತಿಯ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೈಕಿ ಸೀಳು ತುಟಿ ಮತ್ತು ಅಂಗುಲಿನ ಸಮಸ್ಯೆಯುಳ್ಳ ವಿದ್ಯಾರ್ಥಿಗಳನ್ನು ಶಿಕ್ಷಕರು ಗುರುತಿಸಿ, ಪೋಷಕರ ಸಮ್ಮತಿಯೊಂದಿಗೆ ಸೆ.27ರ ಒಳಗಾಗಿ ಮಾಹಿತಿ ನೀಡಬಹುದು. ಈ ಕುರಿತು ಬಿ.ಆರ್.ಸಿ ಕೇಂದ್ರದ ಬಿ.ಐ.ಇ.ಆರ್.ಟಿ ಎನ್.ರಾಜಣ್ಣ ಮೊ. 9880608391, ಪುಷ್ಪ ಮೊ. 9071191389 ಸಂಪರ್ಕಿಸಬಹುದು.

### ಅ.1ರಂದು ವಾಲ್ಮೀಕಿ ಜಯಂತಿ ಪೂರ್ವ ಸಭೆ

» ಚಿತ್ರದುರ್ಗ

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಯಶಸ್ವಿಯಾಗಿ ಆಚರಿಸುವ ಸಲುವಾಗಿ ಅ.1ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಜಿಲ್ಲಾಧಿಕಾರಿಗಳು ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ತಪ್ಪದೇ ಆಗಮಿಸಿ ಸಲಹೆ ಸೂಚನೆಗಳನ್ನು ನೀಡುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸುವಂತೆ ಸ್ಥಾಪಿಸಲಾಗಿರುವ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಇನ್ನಷ್ಟು ಬಲಪಡಿಸಲು 2024–25ನೇ ಸಾಲಿನಲ್ಲಿ ರಾಜ್ಯ ಕೃಷಿ ವಲಯ ಕೃಷಿ ಯಾಂತ್ರೀಕರಣ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಸರ್ಕಾರ ಅನುಮೋದನೆ ನೀಡಿದೆ. ಅದರಂತೆ ಜಿಲ್ಲೆಗೆ ಸಾಮಾನ್ಯ ವರ್ಗದಡಿ ಎಫ್.ಪಿ.ಓ, ಎನ್,ಜಿ.ಓ, ಇತರೆ ಸಂಘ ಸಂಸ್ಥೆಗಳು ಚಾಲ್ತಿಯಲ್ಲಿರುವ ಸಿ.ಹೆಚ್.ಎಸ್.ಸಿ ಗಳಿಗೆ 1 ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ 1 ಕಂಬೈನ್ಡ್ ಹಾರ್ವೆಸ್ಟರ್ ಹಬ್‌ನ್ನು ಸ್ಥಾಪನ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸಂಘ ಸಂಸ್ಥೆಗಳು ನೊಂದಣಿ ಪ್ರಮಾಣ ಪತ್ರ, ಜಿಎಸ್‌ಟಿ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಮತ್ತು ಸಿಹೆಚ್.ಎಸ್.ಸಿ ನಡೆಸಿದ ಅನುಭವದ ವಿವರಗಳನ್ನು ಹಾಗೂ ವೈಯಕ್ತಿಕ ಫಲಾನುಭವಿಗಳು ಅರ್ಜಿಯೊಂದಿಗೆ ಪಹಣಿ, ಎಫ್.ಐ.ಡಿ, ಜಾತಿ ಪ್ರಮಾಣ ಪತ್ರ, ಗುರುತಿನ ಚೀಟಿ, ಬ್ಯಾಂಕ್ ಪಾಸ್‌ಬುಕ್ ಮತ್ತು ರೂ.100 ಗಳ ಛಾಪಾ ಕಾಗದದ ಮೇಲೆ ಹಬ್‌ನ್ನು ಪರಬಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರದೊಂದಿಗೆ ಇದೇ ಸೆ.30ರೊಳಗೆ ಕಚೇರಿಗೆ ಸಲ್ಲಿಸಿ.

# ಸಿಎಂ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ

» ಚಿತ್ರದುರ್ಗ




ಮುಡಾ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬುಧವಾರ ಬಿಜೆಪಿ ಕಾರ್ಯಕರ್ತರು ನಗರದ ಒನಕೆ ಓಬವ್ವ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಇನ್ನೂ ಮೂಡಾ ಹಗರಣದಲ್ಲಿ ರಾಜ್ಯಪಾಲರು ಸಿ ಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದು ಹೈಕೋರ್ಟ್ ಕೂಡ ರಾಜ್ಯಪಾಲರ ಅನುಮತಿಯನ್ನ ಎತ್ತಿ ಹಿಡಿದು ಸಿ ಎಂ ಸಿದ್ದರಾಮಯ್ಯ ವಿರುದ್ಧ ಮೂಡಾ ಹಗರಣದ ಕುರಿತು ತನಿಖೆ ನಡೆಸಲು ಅನುಮತಿ ನೀಡಿದ್ದು ಈ ಹಿನ್ನೆಲೆ ಚಿತ್ರದುರ್ಗ ಜಿಲ್ಲಾ ಬಿಜೆಪಿ ವತಿಯಿಂದ ಸಂಸದ ಗೋವಿಂದ ಕಾರಜೋಳ ನೇತೃತ್ವದಲ್ಲಿ ನಗರದ ಓಬವ್ವ ವೃತ್ತದಲ್ಲಿ ಪ್ರತಿಭಟನೆ ನಡೆಸಿದ್ದು ಸಿದ್ದರಾಮಯ್ಯ ವಿರುದ್ಧ ಘೋಷಣೆಗಳನ್ನ ಕೂಗಿ ಆಕ್ರೋಷ ವ್ಯಕ್ತಪಡಿಸಿದ್ದು ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಆಗ್ರಹ ಮಾಡಿದ್ದಾರೆ.

ಈ ವೇಳೆ ಸಂಸದ ಗೋವಿಂದ ಕಾರಜೋಳ ಮಾತನಾಡಿ, ನ್ಯಾಯಾಲಯ ಸಿದ್ದರಾಮಯ್ಯ ಅವರ ವಿರುದ್ಧ ತೀರ್ಪು ನೀಡಿದ ಹಿನ್ನೆಲೆಯಲ್ಲಿ ಕಳಂಕ ರಹಿತ ಮುಖ್ಯಮಂತ್ರಿ ಎಂಬ ಹೆಸರನ್ನು ಪಡೆಯಬೇಕಿದೆ. ಇಲ್ಲವಾದಲ್ಲಿ ತಮ್ಮ ಕುಟುಂಬ ರಾಜಕಾರಣದಲ್ಲಿ ಸಿಲುಕಿ, ಕಳಂಕಿತ ಮುಖ್ಯಮಂತ್ರಿ ಎಂಬ ಬಿರುದನ್ನು ಪಡೆಯಬೇಕಾಗುತ್ತದೆ ಎಂದು ವಾಗ್ದಾಳಿ ನಡೆಸಿದರು.

ಮುಡಾದಲ್ಲಿ ಸಿದ್ದರಾಮಯ್ಯ ಅವರು ತಮ್ಮ ಪತ್ನಿಯ ಹೆಸರಿನಲ್ಲಿ 3.5 ಲಕ್ಷಕ್ಕೆ ಜಮೀನು ಖರೀದಿ ಮಾಡಿ ಅದರಿಂದ 67 ಕೋಟಿ ರೂ.ಗಳನ್ನು ಕಬಳಿಸಿದ್ದಾರೆ. ಇದು ಪ್ರಜಾಸತ್ತಾತ್ಮಕವಾಗಿ ಮಾಡಿದ ದ್ರೋಹವಾಗಿದ್ದು, ಇದನ್ನು ರಾಜ್ಯದ ಜನತೆ ಒಪ್ಪುವುದಿಲ್ಲ. ನ್ಯಾಯಾಲಯ ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ಇಂದು ಸಂಜೆ ಒಳಗಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಇಲ್ಲವಾದಲ್ಲಿ ಉಗ್ರ ಹೋರಾಟ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯ ಅರ್ಜಿ ವಜಾ ಆಗಿ ರಾಜ್ಯಪಾಲರ ಆದೇಶ ಎತ್ತಿ ಹಿಡಿದಿದೆ. ಈ ಮೂಲಕ ಸಿದ್ದರಾಮಯ್ಯ ಹಗರಣದಲ್ಲಿ ಇರುವುದು ಸಾಬೀತಾಗಿದೆ. ಆದೇಶ ಬಂದ ಕೂಡಲೆ ಕೋರ್ಟ್ ಅವದಿ ಮುಗಿಯುವ ವಳೆಗೆ ಸಿದ್ದರಾಮಯ್ಯ ರಾಜೀನಾಮೆ ಕೊಡುವುದಾಗಿ ನಾಡಿನ ಜನ ಅಂದುಕೊಂಡಿದ್ದು ಸಿದ್ದರಾಮಯ್ಯ ಬಂಡತನ ಪ್ರದರ್ಶನ ಮಾಡಿ ಕುತಂತ್ರದಿಂದ ಮೋದಿ ಮೋಲೆ ಸಂಚಿನ ಆರೋಪ ಮಾಡುತ್ತಿದ್ದು ತಮ್ಮನ್ನ ತಾವು ಆರೋಪಿ ಎಂದು ಸಾಬೀತು ಮಾಡುತ್ತಿದ್ದಾರೆ. ನರೇಂದ್ರ ಮೋದಿಯವರು ಕುತಂತ್ರ ರಾಜಕಾರಣ ಮಾಡುವುದಿಲ್ಲ. ಆದ್ದರಿಂದ ಸಿದ್ದರಾಮಯ್ಯ ಅವರು ತಪ್ಪಿತಸ್ಥರ ಸ್ಥಾನದಲ್ಲಿದ್ದು ರಾಜೀನಾಮೆ ಕೊಟ್ಟು ತನಿಖೆಗೆ ಆದೇಶ ಮಾಡಬೇಕು ಹಾಗಾಗಿ ಕಳಂಕ ಶಾಶ್ವತವಾಗಿ ಅಂಟಿಕೊಳ್ಳುತ್ತದೆ. ಹಾಗಾಗಿ ಸಿದ್ದರಾಮಯ್ಯ ಅವರು ಸಂಜೆಯೊಳಗೆ ಸಿದ್ದರಾಮಯ್ಯ ಅವರು ರಾಜೀನಾಮೆ ಕೊಡಬೇಕು ಎಂದು ಗೋವಿಂದ ಕಾರಜೋಳ ಆಗ್ರಹ ಮಾಡಿದ್ದಾರೆ

ಈ ಹಿಂದೆ ಇದ್ದಂತಹ ಮುಖ್ಯಮಂತ್ರಿಗಳು ತಮ್ಮ ಮೇಲೆ ಆರೋಪ ಬಂದಾಗ ಅವರುಗಳು ಸಹ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ನಿಷ್ಪಕ್ಷಪಾತ ತನಿಖೆ ನಡೆಯಲು ಅವಕಾಶ ಕಲ್ಪಸಿದ್ದರು. ಅದೇ ರೀತಿ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆಗೆ ಒಳಗಾಗಬೇಕು. ತನಿಖೆಯಲ್ಲಿ ತಪ್ಪಿತಸ್ಥರು ಅಲ್ಲ ಎಂದು ತಿಳಿದ ಮೇಲೆ ಅಧಿಕಾರವನ್ನು ಬೇಕಾದರೆ ಪುನಃ ಪಡೆಯಲಿ ಎಂದು ಸಲಹೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಮುರುಳಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಮಾಜಿ ಶಾಸಕ ಎಸ್.ಕೆ.ಬಸವಾರಾಜನ್, ಸೌಭಾಗ್ಯ ಬಸವರಾಜನ್, ಬಿಜೆಪಿ ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಅನಿಲ್ ಕುಮಾರ್, ಡಾ.ಸಿದ್ದಾರ್ಥ ಗುಂಡಾರ್ಪಿ, ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ ವೆಂಕಟೇಶ್ ಯಾದವ್, ಮಲ್ಲಿಕಾರ್ಜನ್, ಶಿವಣ್ಣಚಾರ್,ಮಹಿಳಾ ಘಟಕದ ಅಧ್ಯಕ್ಷ ಶ್ರೀಮತಿ ಶೈಲಜ ರೆಡ್ಡಿ, ಬಸಮ್ಮ, ನಂದಿ ನಾಗರಾಜ್, ಸೇರಿದಂತೆ ಇತರರು ಭಾಗವಹಿಸಿದ್ದರು.

# ಪ್ರವಾಸಿ, ಪಾರಂಪರಿಕ ತಾಣಗಳಲ್ಲಿ ಸ್ವಚ್ಛತೆ

» ಚಿತ್ರದುರ್ಗ

ಸ್ವಚ್ಛತಾ ಹೀ ಸೇವಾ ಪಾಕ್ಷಿಕದ ಅಂಗವಾಗಿ ಚಿತ್ರದುರ್ಗ ನಗರದ ಐತಿಹಾಸಿಕ ಕೋಟೆಯ ಮುಂಭಾಗದ ರಸ್ತೆಯಿಂದ ಶ್ರೀ ಏಕನಾಥೇಶ್ವರಿ ದೇವಸ್ಥಾನದವರೆಗೆ ಮಂಗಳವಾರ ಸ್ವಚ್ಛತಾ ಅಭಿಯಾನ ಕೈಗೊಳ್ಳಲಾಯಿತು.

ಸ್ವಚ್ಛತಾ ಹೀ ಸೇವಾ ಪಾಕ್ಷಿಕದ ಅಂಗವಾಗಿ ಸ್ವಭಾವ–ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ ಕಾರ್ಯಕ್ರಮದ ಅಂಗವಾಗಿ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಬಿ.ಹೆಚ್.ಶಶಿಕುಮಾರ್ ಅವರು ಪ್ರವಾಸಿ ತಾಣಗಳು, ಪ್ರಾರಂಪರಿಕ ತಾಣಗಳು ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಸ್ವಚ್ಛತೆಗೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಪ್ರವಾಸಿ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವುದು ಪ್ರವಾಸಿಗರ ಜವಾಬ್ದಾರಿಯಾಗಿರುತ್ತದೆ ಎಂದು ತಿಳಿಸಿದರು. ಸ್ವಚ್ಛತಾ ಹೀ ಸೇವಾ ಪಾಕ್ಷಿಕ–2024 ಸ್ವಭಾವ ಸ್ವಚ್ಛತಾ–ಸಂಸ್ಕಾರ ಸ್ವಚ್ಛತಾ ಎಂಬ ಅರಿವು ಮೂಡಿಸುವ ಕರಪತ್ರಗಳನ್ನು ಪ್ರವಾಸಿಗರಿಗೆ ವಿತರಿಸಿದರು. ನಂತರ ಚಿತ್ರದುರ್ಗ ಪ್ರವಾಸೋದ್ಯಮ ಕಚೇರಿಯಿಂದ ಶ್ರೀ ಉಚ್ಚಂಗಿಯಲ್ಲಮ್ಮ ದೇವಸ್ಥಾನದವರೆಗೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ಘೋಷಣೆಯನ್ನು ಕೂಗುತ್ತಾ, ವಿಶೇಷವಾಗಿ ಆಸ್ಟ್ರೇಲಿಯಾದಿಂದ



ಚಿತ್ರದುರ್ಗ ಕೋಟೆಯನ್ನು ವೀಕ್ಷಿಸಲು ಬಂದಿದ್ದ ವಿದೇಶಿ ಪ್ರವಾಸಿಗರು, ಪ್ರವಾಸೋದ್ಯಮ ಇಲಾಖೆ ಸಿಬ್ಬಂದಿ, ಪ್ರವಾಸಿ ಮಿತ್ರರು, ಪ್ರವಾಸಿ ಮಾರ್ಗದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಸಿಬ್ಬಂದಿಗಳು ಹಾಗೂ ಸಾರ್ವಜನಿಕರೊಂದಿಗೆ ಜಾಥಾ ನಡೆಸಲಾಯಿತು.

ಸ್ವಚ್ಛತಾಕಾರ್ಯಕ್ರಮದಅಂಗವಾಗಿಐತಿಹಾಸಿಕ ಚಿತ್ರದುರ್ಗ ಕೋಟೆಯಿಂದ ಶ್ರೀ ಏಕನಾಥೇಶ್ವರಿ ಪಾದದ ಗುಡಿಯವರೆಗೆ ರಸ್ತೆಯ ಎಡ ಮತ್ತು ಬಲಭಾಗದಲ್ಲಿ ಬಿದ್ದಿದ್ದ ಪ್ಲಾಸ್ಟಿಕ್, ಕಸಕಡ್ಡಿಗಳು ಹೆಕ್ಕಿ ನಗರಸಭೆಯ ಕಸದ ವಾಹನಕ್ಕೆ ಹಾಕಲಾಯಿತು. ಹಾಗೆಯೇ ಕಸಗೂಡಿಸುವ ಮೂಲಕ ಪ್ರವಾಸೋದ್ಯ ಇಲಾಖೆ ಸಿಬ್ಬಂದಿಗಳು, ಪ್ರವಾಸಿ ಮಿತ್ರರು, ಪ್ರವಾಸಿ ಮಾರ್ಗದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಸಿಬ್ಬಂದಿಗಳ ಸಹಯೋಗದೊಂದಿಗೆ ಸ್ವಚ್ಛತೆಗೊಳಿಸಲಾಯಿತು.

# 28 ರಂದು ಹಿಂದೂ ಮಹಾಗಣಪತಿ ಶೋಭಾಯಾತ್ರೆ



» ಚಿತ್ರದುರ್ಗ

ಹಿಂದೂ ಮಹಾ ಗಣಪತಿಯ ಅಂಗವಾಗಿ ಸೆ. 26 ರಂದು ಬೈಕ್ ಜಾಥಾ ಹಾಗೂ ಸೆ. 28 ರಂದು ಶೋಭಾಯಾತ್ರೆಯನ್ನು ನಡೆಸಲಾಗುವುದೆಂದು 2024ರ ಹಿಂದೂ ಮಹಾ ಗಣಪತಿ ಸೇವಾ ಸಮಿತಿಯ ಅಧ್ಯಕ್ಷ ನಯನ ತಿಳಿಸಿದರು.ಹಿಂದೂ ಮಹಾ ಗಣಪತಿ ಸೇವಾ ಸಮಿತಿವತಿಯಿಂದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 7 ರಿಂದ ಸೆ. 27ರವರೆಗೆ ಗಣಪತಿಗೆ ಪ್ರತಿ ದಿನ ಪೂಜೆಗಳನ್ನು ಮಾಡುವುದರ ಮೂಲಕ ಸಂಜೆ ವಿಶೇಷವಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಗಿದೆ. ಗಣಪತಿ ಪುರಪ್ರವೇಶದಿಂದ ಹಿಡಿದು ಶೋಭಾಯಾತ್ರೆಯವರೆಗೂ ಎಲ್ಲರು ಸಹಾ ಸಹಕಾರವನ್ನು ನೀಡಿದ್ದಾರೆ. ಪ್ರತಿ ದಿನ ಸಾವಿರಾರು ಭಕ್ತಾಧಿಗಳು ಆಗಮಿಸಿ ಹಿಂದೂ ಮಹಾ ಗಣಪತಿಯನ್ನು ವೀಕ್ಷಣೆ ಮಾಡುತ್ತಿದ್ದಾರೆ.


ಪುಟ 2


## ಪ್ರಮುಖ ಸುದ್ದಿ

### ವಿಶ್ವ ಶ್ವಾಸಕೋಶ ದಿನದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್ ಸಲಹೆ

# ಆರೋಗ್ಯಕರ ಶ್ವಾಸಕೋಶಗಳಿಗೆ ಜೀವನಶೈಲಿ ಬದಲಿಸಿ

» ಚಿತ್ರದುರ್ಗ

ಆರೋಗ್ಯಕರ ಶ್ವಾಸಕೋಶಗಳಿಗೆ ಉತ್ತಮ ಅಭ್ಯಾಸಗಳ ಮೂಲಕ ನಿಮ್ಮ ಜೀವನ ಶೈಲಿ ಬದಲಾವಣೆ ಮಾಡಿಕೊಳ್ಳಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಇಲ್ಲಿನ ಚೋಳಘಟ್ಟ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ, ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಪಂಚಾಯಿತಿ ಕ್ಷಿಪ್ರ ನಿಘಾವಣಾ ತಂಡದ ಸದಸ್ಯರಿಗೆ, ಚುನಾಯಿತ ಪ್ರತಿನಿಧಿಗಳಿಗೆ, ಸಮನ್ವಯ ಇಲಾಖೆಗಳ ಕ್ಷೇತ್ರ ಮಟ್ಟದ ಅಧಿಕಾರಿಗಳಿಗೆ ಗ್ರಾಮ ಆರೋಗ್ಯ ಯೋಜನೆ ತರಬೇತಿ ಕಾರ್ಯಾಗಾರ ಹಾಗೂ ವಿಶ್ವ ಶ್ವಾಸಕೋಶ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಶ್ವಾಸಕೋಶಗಳ ಆರೋಗ್ಯ ಕಾಪಾಡುವ ಆಹಾರವನ್ನು ಹೆಚ್ಚಾಗಿ ಸೇವಿಸಬೇಕು. ಶುದ್ಧವಾದ



ಗಾಳಿಯನ್ನು ಸೇವಿಸಿ ಆರೋಗ್ಯಕರ ಶ್ವಾಸಕೋಶ ನಿಮ್ಮದಾಗಲಿ ಎಂದು ಹೇಳಿದರು. ಗ್ರಾಮ ಮಟ್ಟದಲ್ಲಿ ಗ್ರಾಮ ಪಂಚಾಯತಿ ಕ್ಷಿಪ್ರನಿಘಾವಣಾ ತಂಡ ಸಕ್ರಿಯವಾಗಿ ಭಾಗವಹಿಸಿ ಗ್ರಾಮ ಆರೋಗ್ಯ ಯೋಜನೆ ಅನುಷ್ಠಾನಗೊಳಿಸಬೇಕು. ಈ ತರಬೇತಿಯು ನಿಮ್ಮ ಜ್ಞಾನ ಕೌಶಲ್ಯ ಬಲ ಪಡಿಸಲಿದೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಗ್ರಾಮ ಪಂಚಾಯತಿ ಮಟ್ಟದ ನಿಘಾವಣ ತಂಡ ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ತಮ್ಮ ತಮ್ಮ ವ್ಯಾಪ್ತಿಯ ಎಲ್ಲಾ ವಾರ್ಡ್‌ಗಳಲ್ಲಿ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಿ, ಗ್ರಾಮ ಪಂಚಾಯತಿ ವೆಬ್ ಪೋರ್ಟಲ್‌ನಲ್ಲಿ ದತ್ತಾಂಶವನ್ನು ಇಂದನೀಕರಿಸಿ ಒಂದು ಗ್ರಾಮ ಪಂಚಾಯತಿ ಸ್ವಾಸ್ಥ್ಯನಕ್ಷೆ ರಚಿಸಿ ಎಂದರು.

ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕಿ ವಾಸವಿ ಅವರು ಬಾಲ್ಯ ವಿವಾಹ ತಡೆ ಕಾಯ್ದೆ ಗ್ರಾಮ ಪಂಚಾಯತಿ ಜವಾಬ್ದಾರಿ ಬಗ್ಗೆ ತಿಳಿಸಿದರು. ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕಿ ರೂಪ ಅವರು ಮಕ್ಕಳ ಹಕ್ಕು ಅಪೌಷ್ಟಿಕತೆ ಬಗ್ಗೆ ತಿಳಿಸಿದರು. ಮಾನಸಿಕ ಆರೋಗ್ಯ ಸಮಾಲೋಚಕ ಡಾ.ಶ್ರೀಧರ್ ಮಾನಸಿಕ ಆರೋಗ್ಯ ಕಾರ್ಯಕ್ರಮ ಮನೋಚೈತನ್ಯ ಕಾರ್ಯಕ್ರಮದ ಬಗ್ಗೆ ತಿಳಿಸಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಕ್ಷಯರೋಗ, ರಕ್ತಹೀನತೆ ನಿಯಂತ್ರಣ ಕೀಟಜನ್ಯ ರೋಗಗಳ ನಿಯಂತ್ರಣದ ಬಗ್ಗೆ ತಿಳಿಸಿದರು. ತಾಲ್ಲೂಕು ಆಶಾ ಬೋಧಕಿ ತಬಿತ ಕಿಶೋರಿ ಆರೋಗ್ಯದ ಬಗ್ಗೆ ಮಾತನಾಡಿ, ಕಿಶೋರಿಯರಿಗೆ ಸಂಬಂಧಿಸಿದ ಮುಟ್ಟಿನ ದೋಷದ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ನಿರ್ಮಲಾ, ಸದಸ್ಯರಾದ ಸುರೇಶ್ ಉಗ್ರಾಣ್, ಚಂದ್ರಶೇಖರ, ಮಂಜುಳಾ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರೂಪಕುಮಾರಿ, ಸಮುದಾಯ ಆರೋಗ್ಯಾಧಿಕಾರಿ ಪ್ರದೀಪ್, ಆಶಾ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ಮಂಜುಳ ಇದ್ದರು.

ಫಾಸ್ಟ್ ನ್ಯೂಸ್

## ಸ್ವಚ್ಛ ಹೀ ಸೇವಾದಡಿ ಶಾಲೆಯಲ್ಲಿ ಚಿತ್ರಕಲೆ ಕಾರ್ಯಕ್ರಮ




» **ಹೊಸದುರ್ಗ**

ಪಟ್ಟಣದ ಪುರಸಭೆಯ ವತಿಯಿಂದ ನಡೆಯುತ್ತಿರುವ ಸ್ವಚ್ಛ ಹೀ ಸೇವಾದಡಿ ಕಾರ್ಯಕ್ರಮದಲ್ಲಿ ಪಟ್ಟಣದ ಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಸ್ವಚ್ಛತಾ ಚಿತ್ರಕಲೆ ಚಟುವಟಿಕೆಯ ಕಾರ್ಯಕ್ರಮಗಳನ್ನ ಬುಧವಾರ ನಡೆಸಲಾಯಿತು. ಈ ಸಂಧರ್ಬದಲ್ಲಿ ಮಾತನಾಡಿದ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ರಂಗೋಲಿ ಸ್ಪರ್ಧೆ, ಶಾಲೆಯಲ್ಲಿ ಕ್ವಿಜ್, ಪ್ರಬಂಧ ಸ್ಪರ್ಧೆ ಹಾಗೂ ಅಮ್ಮನ ಹೆಸರಿನಲ್ಲಿ ಒಂದು ಗಿಡ ನೆಡುವುದು ಹಾಗೂ ಸ್ವಚ್ಛತಾ ಫ್ಲಡ್ಜ್ ಕಾರ್ಯಕ್ರಮ ಇನ್ನೂ ಇತರೆ ಸ್ವಚ್ಛತೆಯ ಸೇವಾ ಅಭಿಯಾನವನ್ನು ಅನುಷ್ಠಾನಗೊಳಿಸಲು "ಸ್ವಭಾವ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ" ಘೋಷವಾಕ್ಯದಡಿ ಶಾಲೆಯ ಎಲ್ಲಾ ಮಕ್ಕಳಿಗೆ ಚಿತ್ರಕಲೆಯ ಮೂಲಕ ಸ್ವಚ್ಛತೆ ಬಗ್ಗೆ ತಿಳಿಸಿ ಚಿತ್ರಕಲೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಅ.2 ರಂದು ಗಾಂಧೀ ಜಯಂತಿ ದಿವಸ ಬಹುಮಾನ ವಿತರಣೆ ಮಾಡಲಾಗುವುದು ಎಂದು ತಿಳಿಸಿದ ಅವರು ಮನೆಯಲ್ಲಿ ಬರುವ ತ್ಯಾಜ್ಯದ ವಿಲೇವಾರಿ ಬಗ್ಗೆ ಹಾಗೂ ಸಾಂಕ್ರಾಮಿಕ ರೋಗಗಳ ಬಗ್ಗೆ ವಿವರವಾಗಿ ತಿಳಿಸಿ ಆರೋಗ್ಯ ಸಂರಕ್ಷಣಾ ಯೋಜನೆಗಳನ್ನ ತಿಳಿಸಿದರು. ಪುರಸಭಾ ಅಧ್ಯಕ್ಷೆ ಶ್ರೀಮತಿ ರಾಜೇಶ್ವರಿ ಆನಂದ್ ಮಾತನಾಡಿ ಸ್ವಚ್ಛ ಹೀ ಸೇವಾ ಕಾರ್ಯಕ್ರಮದಲ್ಲಿ ಎಲ್ಲಾ ಶಾಲಾ ಮಕ್ಕಳು ತಮ್ಮ ಮನೆಯ ಸುತ್ತ-ಮುತ್ತಲೂ ಪರಿಸರವನ್ನು ಹಾಗೂ ಶಾಲೆಯಲ್ಲಿ ಸ್ವಚ್ಛತೆ ಕಾಪಾಡುವುದು ಮತ್ತು ಶುದ್ಧ ಕುಡಿಯುವ ನೀರನ್ನು ಕುಡಿಯಲು ಬಳಸಬೇಕು ಎಂದು ತಿಳಿಸಿದರು. ಈ ಸಂಧರ್ಭದಲ್ಲಿ ಉಪಾಧ್ಯಕ್ಷೆ ಶ್ರೀಮತಿ ಗೀತಾ ಆಸಂಧಿ,ಮಾಜಿ ಅಧ್ಯಕ್ಷ ಶ್ರೀನಿವಾಸ್, ಮಾಜಿ ಉಪಾಧ್ಯಕ್ಷೆ ಶ್ರೀಮತಿ ಜ್ಯೋತಿ ಕೆಂಚಪ್ಪ, ಹಿರಿಯ ಸದಸ್ಯ ದಾಳಿಂಬೆಗಿರೀಶ್ ಮತ್ತಿತರೆ ಸದಸ್ಯರುಗಳು ಆರೋಗ್ಯ ನಿರೀಕ್ಷಕ ಬಸವರಾಜ ಎಂ, ಕಲ್ಪನಾ ಟಿ, ಸಾವಿತ್ರಿ ಎನ್, ಗೀತಾ, ವಿಕಾಸ್, ಕುಮಾರ್, ರಾಜೇಶ್ ಇನ್ನಿತರೆ ಸಿಬ್ಬಂದಿಗಳು ಹಾಗೂ ಪೌರಕಾರ್ಮಿಕರು ಹಾಗೂ ಶಾಲಾ ಮಕ್ಕಳು ಮತ್ತು ಶಾಲಾ ಶಿಕ್ಷಕರು ಹಾಗೂ ಸಾರ್ವಜನಿಕರು ಹಾಜರಿದ್ದರು. ಇದೇ ಸಂಧರ್ಬದಲ್ಲಿ ಶಾಲಾ ಮಕ್ಕಳು ಸ್ವಚ್ಚತೆ ಬಗ್ಗೆ ಜಾಗೃತಿ ಬಿತ್ತಿ ಪತ್ರಗಳನ್ನ ಪ್ರದರ್ಶನ ಮಾಡಿದರು

## ಹಳೆ ವಿದ್ಯಾರ್ಥಿಗಳಿಂದ ಪೀಠೋಪಕರಣ ಕೊಡುಗೆ



» **ಪರಶುರಾಂಪುರ**

ಹಳೆಯ ವಿದ್ಯಾರ್ಥಿಗಳು ಓದಿ ವಿದ್ಯೆ ಕಲಿತ ಶಾಲೆಗೆ ಪೀಠೋಪಕರಣ ನೀಡುವ ಮೂಲಕ ತಮ್ಮ ಅಳಿಲು ಸೇವಾ ಮನೋಭಾವನೆಯಿಂದ ಗುರುವಂದನೆ ಸಲ್ಲಿಸಿದ್ದು ಮುಂದಿನ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ ಎಂದು ಗ್ರಾಪಂ ಅಧ್ಯಕ್ಷ ಜಗಲೂರುಸ್ವಾಮಿ ತಿಳಿಸಿದರು. ಗ್ರಾಮದ ಸರ್ಕಾರಿ ಕೆಪಿಎಸ್ ಶಾಲೆಯ ಬಾಲಕಿಯರ ಶಾಲೆಯಲ್ಲಿ ಓದಿದ ಹಳೆ ವಿದ್ಯಾರ್ಥಿಗಳಿಂದ ಶಾಲೆಗೆ ಪೀಠೋಪಕರಣ ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಹಳೆಯ ವಿದ್ಯಾರ್ಥಿಗಳಿಂದ ಕೊಡ ಮಾಡಿದ ಕೊಡುಗೆ ಸತ್ಕಾರ್ಯವು ಮೆಚ್ಚುವಂತಹದ್ದು ಎಂದು ಶ್ಲಾಘಿಸಿದರು. ಪ್ರಾಚಾರ್ಯ ನಾಗರಾಜ ಮಾತನಾಡಿ,ಹಳೆಯ ವಿದ್ಯಾರ್ಥಿಗಳು ಉತ್ತಮ ಗುರುವಿನ ಮಾರ್ಗದರ್ಶನ ಮೂಲಕ ಕಲಿಕೆಯ ಜೀವಂತಿಕೆಯನ್ನು ನೆನಪಿನ ಬುತ್ತಿಯಿಂದ ಶಾಲೆಗೆ ದೇಣಿಗೆಯ ಸಹಕಾರ ನೀಡುವ ಮೂಲಕ ಪ್ರೋತ್ಸಾಹಿಸುವ ಉದ್ದೇಶವು ಮುಂದಿನವರಿಗೆ ಸ್ಫೂರ್ತಿಯಾಗಲಿದೆ ಎಂದು ಪ್ರಶಂಸೆಯ ಮಾತುಗಳನ್ನಾಡಿದರು. ಸದಸ್ಯ ನಾಗಭೂಷಣ್ ಮಾತನಾಡಿ, ಜ್ಞಾನ ದೀವಿಗೆಯಿಂದ ಸಮಾಜದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಲು ಮಹತ್ತರ ಪಾತ್ರವಹಿಸಿದೆ ಎಂದರು. ಕಾರ್ಯಕ್ರಮದಲ್ಲಿ ಸಿಆರ್ಪಿ ಶಿವಶಂಕರಪ್ಪ ,ಸದಸ್ಯರಾದ ಪ್ರಕಾಶ್, ನಿವೃತ್ತ ಶಿಕ್ಷಕ ಓಂಕಾರಪ್ಪ , ಶಿಕ್ಷಕರಾದ ಜ್ಯೋತಿ ಚಂದ್ರಕಲ,ದಾಕ್ಷಾಯಿಣಮ್ಮ ,ಸುಮಂಗಳಮ್ಮ, ಮಂಜುನಾಥ, ರಂಗಸ್ವಾಮಿ,ಮಮತ ,ಉಷಾ ಸಜ್ಜನ್, ಭವ್ಯ,ವೀಣಾ,ಗೀತಮ್ಮ,ಸೌಮ್ಯ, ಹಾಲಮ್ಮ, ವಸಂತಮ್ಮ, ಸುರೇಶ್ , ಸಿಬ್ಬಂದಿ ಶಿಲ್ಪ,ಕಾಮಾಕ್ಷಿ ,ಅಡುಗೆ ಸಿಬ್ಬಂದಿಯ ಹಾಗೂ. ಹಳೆಯ ವಿದ್ಯಾರ್ಥಿಗಳ ಸಂಘದ ಸದಸ್ಯರಾದ ಚಂದ್ರಕಲ, ಲೀಲಾ,ರಂಜಿತ, ಅಕ್ಷತ , ಉಷಾ,ಮಂಜುಳ,ಸುಧಾ,ಅಶ್ವಿನಿ ,ಭಾನುಪ್ರಿಯ, ಶಶಿಕಲಾ, ಗೀತ,ಸೌಮ್ಯ, ಇಂದ್ರಾಣಿ,ನಂದಿನಿ,ಕಾಂಚನ,ಮಾಲಾ,ವಿದ್ಯಾ, ತಿಮ್ಮಯ್ಯ, ತಿಪ್ಪೇಸ್ವಾಮಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ರಾಜ್ಯಪಾಲರ ನಡೆ ಖಂಡಿಸಿ ನಗರದಲ್ಲಿ ಹಿಂದುಳಿದ ಜಾತಿಗಳ ಒಕ್ಕೂಟ ಪ್ರತಿಭಟನೆ

» **ಚಿತ್ರದುರ್ಗ**

ಸಿದ್ದರಾಮಯ್ಯರವರನ್ನು ಅಧಿಕಾರದಿಂದ ಕೆಳಗಿಳಿಸಲು ಬಿಜೆಪಿ ಪಕ್ಷ ಮುಂದಾಗಿದೆ ಈ ಹಿನ್ನೆಲಯಲ್ಲಿ ಮುಡಾ ಪ್ರಕರಣ ಒಂದು ನೆಪ ಅಷ್ಟೇ. ಬಡವರು ಮತ್ತು ಶೋಷಿತರ ಪರವಾಗಿರುವ ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ನಿಲ್ಲಿಸಬೇಕೆಂಬುದೇ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮುಖ್ಯ ಉದ್ದೇಶ. ಆದರೆ ಇವರ ಆಟ ನಡೆಯುವುದಿಲ್ಲ ಎಂದು ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್. ಕೆ.ಸರ್ದಾರ್ ಬಿಜೆಪಿ ಪಕ್ಷದ ವಿರುದ್ದ ವಾಗ್ದಾಳಿಯನ್ನು ನಡೆಸಿದರು.



ಚಿತ್ರದುರ್ಗ ನಗರದ ಅಂಬೇಡ್ಕರ್ ವೃತ್ತದಲ್ಲಿ ಬುಧವಾರ ಅಹಿಂದ ಒಕ್ಕೂಟದವತಿಯಿಂದ ಸಿದ್ದರಾಮಯ್ಯ ರವರ ಪರವಾಗಿ ಅವರಿಗೆ ನೈತಿಕವಾಗಿ ಬೆಂಬಲವನ್ನು ನೀಡುವ ಸಲುವಾಗಿ ಇಂದು ಧರಣಿಯನ್ನು ನಡೆಸಿದ ಅಭೀಮಾನಿ, ಹಿತೈಷಿಗಳು, ಅದರಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಿದ್ಧರಾಮಯ್ಯ ಎಂದರೆ ಒಬ್ಬ ವ್ಯಕ್ತಿ ಅಲ್ಲ, ಒಂದು ಸಿದ್ಧಾಂತ. ಆ ಸಿದ್ಧಾಂತ ಬಿಜೆಪಿ ಪಕ್ಷದ ವಿರೋಧಿ ಸಿದ್ಧಾಂತ. ಹಾಗಾಗಿ ಆ ಸಿದ್ಧಾಂತವನ್ನು ಸೋಲಿಸಬೇಕು ಎಂಬುದು ಬಿಜೆಪಿ ಪಕ್ಷದ ಗುರಿಯಾಗಿದೆ. ಇನ್ನು ಮುಡಾ ಪ್ರಕರಣದಲ್ಲಿ ಸಿದ್ಧರಾಮಯ್ಯ ಪಾತ್ರವೇನೂ ಇಲ್ಲ ಎಂಬುದು ಸ್ವತಃ ಬಿಜೆಪಿ ನಾಯಕರಿಗೇ ಗೊತ್ತಿದೆ. ಆದರೆ ಅವರು ಶಿಕಾರಿ ಮಾಡಲು ಹೊರಟಿರುವುದು ಸಿದ್ಧರಾಮಯ್ಯ ಅವರು ಪ್ರತಿಪಾದಿಸುವ, ಪ್ರತಿನಿಧಿಸುವ ಸಿದ್ಧಾಂತವನ್ನು ಎಂದರು.

ಬಿಜೆಪಿಯವರಿಗೆ ಯಾರು ಮುಖ್ಯಮಂತ್ರಿಯಾದರೂ ಬೇಸರವಿಲ್ಲ, ಆದರೆಸಿದ್ಧರಾಮಯ್ಯಮುಖ್ಯಮಂತ್ರಿಯಾಗಿರಬಾರದು. ಯಾಕೆಂದರೆ ಮುಖ್ಯವಾಗಿ ಸಿದ್ದರಾಮಯ್ಯ ಭ್ರಷ್ಟಾಚಾರಿಯಲ್ಲ, ಅವರಿಗೆ ಭ್ರಷ್ಟಾಚಾರದ ಪಟ್ಟ ಕಟ್ಟಿ ಮೂಲೆಗೆ ತಳ್ಳಿದರೆ ಬಿಜೆಪಿಯವರಿಗೆ ಮುಂದಿನ ಹಂತದ ತಂತ್ರ ಕುತಂತ್ರಗಳು ಸಲೀಸಾಗುತ್ತವೆ. ಸಿದ್ದರಾಮಯ್ಯ ಕ್ರಿಯಾಶೀಲರಾಗಿ ಇರುವವರೆಗೆ ಕರ್ನಾಟಕದಲ್ಲಿ ಬಿಜೆಪಿಯ ಆಟಗಳು ನಡೆಯೋದಿಲ್ಲ. ಮುಂದಿನ ವಿಧಾನಸಭೆ ಚುನಾವಣೆಯಲ್ಲೂ ಬಿಜೆಪಿ ಸ್ವಂತ ಶಕ್ತಿಯಿಂದ ಅಧಿಕಾರಕ್ಕೆ ಬರುವುದು ಸಾಧ್ಯವಿಲ್ಲ ಎಂದು ಅರಿತಿರುವ ಬಿಜೆಪಿ ಅವರನ್ನು ವ್ಯವಸ್ಥಿತವಾಗಿ ಮುಗಿಸಲು ಹೋರಟಿದೆ ಆದರೆ ಇದು ಯಾವ ಆಟವೂ ನಡೆಯುವುದಿಲ್ಲ ಎಂದಿದ್ದಾರೆ.

ಅಹಿಂದ ಒಕ್ಕೂಟದ ಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ಮಾತನಾಡಿ, ಘನ ಉಚ್ಚ ನ್ಯಾಯಾಲಯ ನೀಡಿರುವ ತೀರ್ಪು ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಬಹುದು ಎಂಬುದನ್ನು ಹೇಳಿದೆ ಅಷ್ಟೇ, ವಿನಃ ಮೂಡಾ ವಿಷಯದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಪಾತ್ರದ ಬಗ್ಗೆ ನೀಡಿದ ತೀರ್ಪಲ್ಲ! ಇದನ್ನು ನಾಡಿನ ಜನರು ಅರ್ಥ ಮಾಡಿಕೊಂಡಿದ್ದಾರೆ.ಈ ರಾಜಕೀಯ ಹೋರಾಟದಲ್ಲಿ ರಾಜ್ಯದ ಜನ ನಮ್ಮ ಸಿದ್ದರಾಮಯ್ಯ ನವರ ಹಿಂದೆ ಇದ್ದಾರೆ. ಏಳು ಕೋಟಿ ಜನರ ಆಶೀರ್ವಾದವೇ ಸಿದ್ದರಾಮಯ್ಯ ನವರಿಗೆ ಶ್ರೀರಕ್ಷೆ. ಕಾನೂನು ಮತ್ತು ಸಂವಿಧಾನದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನಂಬಿಕೆ ಇದೆ. ಈ ಹೋರಾಟದಲ್ಲಿ ಅಂತಿಮವಾಗಿ ಸತ್ಯಕ್ಕೆ ಜಯ ಸಿಗಲಿದೆ. ಇದು ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರ್ಕಾರದ ಸೇಡಿನ ರಾಜಕೀಯದ ವಿರುದ್ಧದ ಹೋರಾಟ. ಬಿಜೆಪಿ, ಜೆಡಿಎಸ್‌ನ ಈ ಸೇಡಿನ ರಾಜಕೀಯದ ವಿರುದ್ಧ ನಮ್ಮ ನ್ಯಾಯಾಂಗದ ಹೋರಾಟ ಮುಂದುವರಿಯಲಿದೆ ಎಂದರು.

ಅಹಿಂದ ಮುಖಂಡ ಬಿ.ಟಿ.ಜಗದೀಶ್ ಮಾತನಾಡಿ, ನಮ್ಮ ಪಕ್ಷದ ಎಲ್ಲ ಶಾಸಕರು, ನಾಯಕರು ಮತ್ತು ಕಾರ್ಯಕರ್ತರು ಹಾಗೂ ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯನವರ ಪರವಾಗಿ ಭದ್ರವಾಗಿ ನಿಂತಿದ್ದು, ಕಾನೂನಿನ ಹೋರಾಟ ಮುಂದುವರಿಸುವಂತೆ ಉತ್ತೇಜನ ನೀಡಿದ್ದಾರೆ.ಸಿದ್ದರಾಮಯ್ಯನವರು ಬಡವರ ಪರವಾಗಿದ್ದಾರೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿದ್ದಾರೆ. ಎನ್ನುವ ಕಾರಣಕ್ಕಾಗಿ ಸಿದ್ದರಾಮಯ್ಯ ನವರ ವಿರುದ್ದ ಬಿಜೆಪಿ, ಜೆಡಿಎಸ್ ರಾಜಕೀಯ ಪ್ರತಿಕಾರಕ್ಕೆ ಇಳಿದಿದೆ. ಮುಡಾ ಪ್ರಕರಣ ಒಂದು ನೆಪ ಅಷ್ಟೇ. ಬಡವರು ಮತ್ತು ಶೋಷಿತರ ಪರವಾಗಿರುವ ನಮ್ಮ ಸರ್ಕಾರದ ಯೋಜನೆಗಳನ್ನು ನಿಲ್ಲಿಸಬೇಕೆಂಬುದೇ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮುಖ್ಯ ಉದ್ದೇಶ.

ಸಿದ್ದರಾಮಯ್ಯನವರ ರಾಜೀನಾಮೆ ಕೇಳುತ್ತಿರುವ ಇದೇ ನಾಯಕರು ನಾನು ರಾಜ್ಯದ ಬಡವರು, ಶೋಷಿತರ ಪರವಾಗಿ ಜಾರಿಗೆ ತಂದಿದ್ದ ಯೋಜನೆಗಳನ್ನು ವಿರೋಧಿಸಿದವರೇ ಆಗಿದ್ದಾರೆ. ರಾಜಭವನವನ್ನು ದುರ್ಬಳಕೆ ಮಾಡಿಕೊಂಡು ಸಿದ್ದರಾಮಯ್ಯನವರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ಮೂಲಕ ನಮ್ಮ ಸರ್ಕಾರವನ್ನು ಅಸ್ಥಿರಗೊಳಿಸುವ ಹುನ್ನಾರ ನಡೆಸಿದ್ದಾರೆ. ರಾಜಭವನದ ದುರ್ಬಳಕೆ ಮೂಲಕ ವಿರೋಧ ಪಕ್ಷಗಳ ಸರ್ಕಾರವನ್ನು ಹಣಿಯುವ ಸಂಚನ್ನು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶಾದ್ಯಂತ ನಡೆಸುತ್ತಿದೆ. ಸಿದ್ದರಾಮಯ್ಯನವರ ಪ್ರಕರಣದಲ್ಲಿಯೂ ಬಿಜೆಪಿ ಮತ್ತು ಜೆಡಿಎಸ್ ಇದೇ ರೀತಿ ಮುಖಭಂಗ ಅನುಭವಿಸುವುದು ಖಂಡಿತ.ನಮಗೆ ದೇಶದ ಸುಪ್ರೀಂ ಕೋರ್ಟ್‌ನಲ್ಲಿ ನ್ಯಾಯ ಸಿಗಲಿದೆ. ನ್ಯಾಯ ಸತ್ಯದ ಮೇಲೆ ನಮಗೆ ನಂಬಿಕೆ ಇದೆ ಎಂದರು.

ಈ ಧರಣಿಯಲ್ಲಿ ನಗರಸಭೆಯ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಚ್.ಮಂಜಪ್ಪ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಎಸ್. ಎನ್.ರವಿಕುಮಾರ್, ಪರಿಶಿಷ್ಟ ವರ್ಗ ವಿಭಾಗದ ಅಧ್ಯಕ್ಷ ಮಂಜುನಾಥ್, ಎಸ್ಸಿ. ವಿಭಾಗದ ಉಪಾಧ್ಯಕ್ಷ ಡಿ.ಕುಮಾರ್ ಪಿಳ್ಳೆಕೆರನಹಳ್ಳಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ಗೀತನಂದಿನಿಗೌಡ, ಮೃತ್ಯುಂಜಯ, ಮಾಳೇಶ್, ನಿವೃತ್ತ ಡಿವೈಎಸ್ಪಿ. ಅಬ್ದುಲ್‌ರೆಹಮಾನ್, ಸೈಯದ್‌ಖುದ್ದೂಸ್, ಮುದಸಿರ್ ನವಾಜ್, ಪ್ರಕಾಶ್‌ರಾಮನಾಯ್ಕ, ಅಶೋಕ್‌ನಾಯ್ಡು, ಸುರೇಶ್‌ಬಾಬು, ರಘು, ವಸೀಂ ಬಡಾಮಕಾನ್, ಮೆಹಬೂಬ್‌ಖಾನ್, ನಗರ ಕಾಂಗ್ರೆಸ್ ಉಪಾಧ್ಯಕ್ಷ ಲೋಕೇಶ್ ಇನ್ನು ಅನೇಕರು ಧರಣಿಯಲ್ಲಿ ಪಾಲ್ಗೊಂಡಿದ್ದರು.

# ತಂಬಾಕು ಕಾನೂನು ಬಾಹಿರ ಮಾರಾಟದ ವಿರುದ್ದ ಕ್ರಮವಾಗಲಿ; ನ್ಯಾ. ಮಹಾವೀರ್ ಮಾ. ಕರೆಣ್ಣವರ್

» **ದಾವಣಗೆರೆ**

ತಂಬಾಕು ಉತ್ಪನ್ನಗಳ ಸೇವನೆಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಿಲ್ಲೆಯಾದ್ಯಂತ ವ್ಯಾಪಕವಾಗಿ ಪ್ರಚಾರದ ಜೊತೆಗೆ, ಕಾನೂನುಬಾಹಿರ ಮಾರಾಟ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ್ ಮಾ ಕರೆಣ್ಣವರ್ ತಿಳಿಸಿದರು.

ಅವರು(ಸೆ.24) ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ. ತಂಬಾಕು ಮುಕ್ತ ಯುವ ಅಭಿಯಾನ 2 ಕಾರ್ಯಕ್ರಮದ ಅನುಷ್ಠಾನದ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದರು. ಜಿಲ್ಲೆಯಲ್ಲಿ ಸೆ.24 ರಿಂದ ನ.23 ರವರೆಗೆ ತಂಬಾಕು ಮುಕ್ತ ಯುವ ಅಭಿಯಾನ 2.0 ಆರಂಭವಾಗಲಿದೆ. ಈ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.



ಜಿಲ್ಲೆಯಲ್ಲಿನ 160 ಶಾಲಾ, ಕಾಲೇಜುಗಳಲ್ಲಿ 60 ದಿನಗಳ ಕಾಲ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಹಾಗೂ ತಂಬಾಕು ಮುಕ್ತ ಗ್ರಾಮ, ತಂಬಾಕು ಮುಕ್ತ ಕಚೇರಿ ಹಾಗೂ ತಂಬಾಕು ಮುಕ್ತ ಶಾಲೆ ಘೋಷಣೆ ಮಾಡಲು ನಾವೆಲ್ಲರು ಶ್ರಮಿಸಬೇಕು ಎಂದು ತಿಳಿಸಿ ಶಾಲಾ-ಕಾಲೇಜು ಆವರಣಗಳಲ್ಲಿ 100 ಮೀಟರ್ ಪ್ರದೇಶ ವ್ಯಾಪ್ತಿಯಲ್ಲಿ ತಂಬಾಕು ಸೇವನೆ ಹಾಗೂ ಮಾರಾಟ ನಿಷೇಧ ಎಂದು ಹಳದಿ ಬಣ್ಣದ ಲೈನ್ ಹಾಕಿಕೊಳ್ಳಬೇಕು ಎಂದು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಅಧ್ಯಕ್ಷತೆ ವಹಿಸಿ ಜಿಲ್ಲಾ ಮಟ್ಟದ ತಂಬಾಕು ಮುಕ್ತ ಯುವ ಅಭಿಯಾನ 2.0 ಪೋಸ್ಟರ್ ಬಿಡುಗಡೆ ಮಾಡಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ, ರಾಘವನ್ ತಂಬಾಕು ಮುಕ್ತ ಅರಿವು ಕಾರ್ಯಕ್ರಮ ಆಯೋಜಿಸುವ ಕುರಿತು ಸಂಕ್ಷಿಪ್ತ ಮಾಹಿತಿ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯ ಕುಮಾರ್ ಎಂ.ಸಂತೋಷ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೊಟ್ರೇಶ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ತಾಳಿಕಟ್ಟೆ ಹಾಗೂ ರಾಮಗಿರಿಯಲ್ಲಿ ಪೋಷಣ್ ಮಾಸಾಚರಣೆ



» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ತಾಳಿಕಟ್ಟೆ ಹಾಗೂ ರಾಮಗಿರಿಯಲ್ಲಿ ಸೆ.24 ಮಂಗಳವಾರ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯವಾಗಿ ಗೊಲ್ಲರಹಟ್ಟಿಗಳಲ್ಲಿ ಆಚರಿಸುತ್ತಿರುವ ಕೆಲವು ಮೂಢನಂಬಿಕೆಗಳ ಆಚರಣೆ ಕುರಿತು ಅರಿವು ಮೂಡಿಸಿಲಾಯಿತು. ಗರ್ಭಿಣಿಯರಿಗೆ ಸೀಮಂತ ಹಾಗೂ ಆರು ತಿಂಗಳ ಮೇಲ್ಪಟ್ಟ ಮಕ್ಕಳಿಗೆ ಅನ್ನಪ್ರಾಶನ ಮಾಡಿಸಲಾಯಿತು. ಬಾಲ್ಯ ವಿವಾಹ ತಡೆ ಪ್ರತಿಜ್ಞಾ ವಿಧಿಯನ್ನು ಬೋಧಿಸಿಲಾಯಿತು. ಜಿಲ್ಲಾ ನಿರೂಪಣಾಧಿಕಾರಿ ವಿಜಯ್ ಕುಮಾರ್ ಪೋಷಣಾ ಮಾಸಾಚರಣೆ, ಬಾಲ್ಯ ವಿವಾಹ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಮತಾ ಸೇರಿದಂತೆ, ಶಿಶು ಮೇಲ್ವಿಚಾರಕೀಯರು, ಪೋಷಣ್ ಅಭಿಯಾನ ಜಿಲ್ಲಾ ಹಾಗೂ ತಾಲ್ಲೂಕು ಸಂಯೋಜಕರು, ಗ್ರಾಮ ಪಂಚಾಯಿತಿ ಸದಸ್ಯರು, ಆರೋಗ್ಯ ಇಲಾಖೆ ವೈದ್ಯರು, ಶಾಲಾ ಶಿಕ್ಷಕರು , ಸ್ತ್ರೀಶಕ್ತಿ ಸಂಘದ ಸದಸ್ಯರು ಗ್ರಾಮದ ಮುಖಂಡರು, ಗರ್ಭಿಣಿಯರು ಹಾಗೂ ಬಾಣಂತಿಯರು ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಸಹಾಯಕರು ಭಾಗವಹಿಸಿದ್ದರು.

ಪ್ರಮುಖ ಸುದ್ದಿ

### ನಾಗರಿಕ ಸೌಹಾರ್ದ ಶಾಂತಿ ಸಭೆ: ಒಗ್ಗಟ್ಟು ಮೆರೆಯೋಣ, ಕಿಡಿಗೇಡಿಗಳ ಮೇಲೆ ನಿರ್ಧಾಕ್ಷಿಣ್ಯ ಕ್ರಮ

# ಎಲ್ಲರೂ ಒಂದಾಗಿ ಶಾಂತಿ, ಸೌಹಾರ್ದತೆ ಕಾಪಾಡಿ: ಸಚಿವ

» **ದಾವಣಗೆರೆ**

ದಾವಣಗೆರೆನಗರರಾಜ್ಯದಲ್ಲಿಯೇಮಾದರಿ, ಅಭಿವೃದ್ಧಿ ಹೊಂದಿದ ನಗರವನ್ನಾಗಿಸಲು ಶಾಂತಿ, ಸೌಹಾರ್ದತೆ ಕಾಪಾಡಿಕೊಂಡು ಒಗ್ಗಟ್ಟಾಗಿ ಧಾರ್ಮಿಕ ಆಚರಣೆಯಲ್ಲಿ ಭಾಗವಹಿಸೋಣ. ಮುಂದಿನ ದಿನಗಳಲ್ಲಿ ಶಾಂತಯುತ ಮೆರವಣಿಗೆ ಮಾಡಲು ಜಿಲ್ಲಾಡಳಿತದಿಂದ ಮಾರ್ಗಸೂಚಿಗಳನ್ನು ರೂಪಿಸಲಾಗುತ್ತದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ನಡೆದ ದಾವಣಗೆರೆ ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ನಾಗರಿಕ ಸೌಹಾರ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗಣೇಶ ಮೆರವಣಿಗೆ ಹಾಗೂ ಇತರೆ ಸಮುದಾಯದವರು ನಡೆಸುವ ಮೆರವಣಿಗೆಯಲ್ಲಿ ನಡೆಯುವ ಸಣ್ಣ ಘಟನೆಗಳು ಸಮಾಜಕ್ಕೆ ಬಹಳ ನಷ್ಟ ಉಂಟು ಮಾಡುತ್ತವೆ, ಈ ಹಿಂದೆ 1991-92 ರಲ್ಲಿ ನಡೆದ ಸಣ್ಣ ಘಟನೆಯಿಂದ ಜನರು ಅನೇಕ ಸಂಕಷ್ಟಗಳನ್ನು ಎದುರಿಸುವಂತಾಯಿತು. ಮೊನ್ನೆ ಅರಳಿಮರದ ವೃತ್ತದಲ್ಲಿ ನಡೆದ ಘಟನೆಯು ಅಷ್ಟೆ ಪ್ರಚೋದನಕಾರಿ ಪೋಸ್ಟ್‌ನಿಂದಾಗಿದ್ದು ಘಟನೆ ನಡೆದ ತಕ್ಷಣ ಪೊಲೀಸ್ ಇಲಾಖೆ ಸೂಕ್ತವಾದ ಕ್ರಮ ಕೈಗೊಂಡು ನಿಯಂತ್ರಿಸಿದೆ. ಈ ರೀತಿ ಮುಂದೆ ಯಾವುದೇ ಘಟನೆಗಳು ನಡೆಯಬಾರದು ಎಂದರು.




ಜಿಲ್ಲೆಯಲ್ಲಿ ಎಲ್ಲಾ ಕಡೆ ಶಾಂತಯುತವಾದ ವಾತಾವರಣವಿದ್ದು ಈಗಾಗಲೇ ಮಲೆಬೆನ್ನೂರು, ಚನ್ನಗಿರಿ ಗಣೇಶನ ಉತ್ಸವಗಳು ಬಹಳ ಸೌಹಾರ್ದಯುತವಾಗಿ ಮುಗಿದಿವೆ. ನಗರದಲ್ಲಿ ಇನ್ನೂ ಅನೇಕ ಗಣೇಶನ ಮೆರವಣಿಗೆಗಳಿವೆ ಹಾಗೂ ವಿಜಯದಶಮಿ ಹಬ್ಬವು ಇರುವುದರಿಂದ ಎಲ್ಲರೂ ಸಹಾರ್ದತೆಯಿಂದಿರಬೇಕು. ಬಾವುಟ ಕಟ್ಟಲು ಕೆಲವು ಸಂದರ್ಭದಲ್ಲಿ ಗಲಾಟೆಗಳಾಗಿವೆ, ಈ ಬಗ್ಗೆ ಮಂದಿನ ದಿನಗಳಲ್ಲಿ ನಿಯಮಗಳನ್ನು ರೂಪಿಸಲಾಗುತ್ತದೆ. ಯುವಕರು ಸಾಕಷ್ಟು ಯೋಚನೆ ಮಾಡಬೇಕು. ಯುವಕರು ಗಲಾಟೆಗಳಲ್ಲಿ ಭಾಗಿಯಾಗಬಾರದು, ಎಲ್ಲರೂ ಶಾಂತಿ, ಸೌಹಾರ್ದತೆ ಮರೆಯಬೇಕು. ಯಾರಾದರೂ ಕಾನೂನು ಕ್ರಮ ಕೈಗೊಂಡಲ್ಲಿ ಪೊಲೀಸ್ ಇಲಾಖೆಯು ನಿರ್ಧಾಕ್ಷೀಣ್ಯ ಕ್ರಮ ಜರುಗಿಸಲಿದೆ. ಅವರ ಕಾರ್ಯದಲ್ಲಿ ಎಂದಿಗೂ ಹಸ್ತಕ್ಷೇಪ ಮಾಡುವುದಿಲ್ಲ ಎಂದರು.

ಸಿಸಿ.ಟಿ.ವಿ ಸರ್ವಲೆನ್ಸ್ ಹೆಚ್ಚಳ; ನಗರದಲ್ಲಿ ಈಗಾಗಲೇ 500 ಕ್ಕಿಂತಲೂ ಹೆಚ್ಚಿನ ಸಿಸಿಟಿವಿ ಕ್ಯಾಮೆರಾಗಳು ಸರ್ವಲೆನ್ಸ್ ಮಾಡುತ್ತಿದ್ದು ನಗರಕ್ಕೆ ಪ್ರವೇಶಿಸುವ ಎಲ್ಲಾ ಮಾರ್ಗಗಳಲ್ಲಿ ಮತ್ತು ವೃತ್ತ, ಸಂಪರ್ಕ ರಸ್ತೆ ಸೇರಿದಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸಿಸಿಟಿವಿ ಹೆಚ್ಚಳ ಮಾಡುವ ಮೂಲಕ ಕಿಡಿಗೇಡಿಗಳ ಪತ್ತೆಗೆ ಹೆಚ್ಚಿನ ನಿಗಾವಹಿಸಲಾಗುತ್ತದೆ. ಯಾವುದೇ ಕಿಡಿಗೇಡಿಗಳು ಸರಗಳ್ಳತನ, ಬೆದರಿಕೆ ಒಡ್ಡುವುದು ಸೇರಿದಂತೆ ಕಾನೂನು ಬಾಹಿರ ಕೃತ್ಯದಲ್ಲಿ ಭಾಗಿಯಾದಲ್ಲಿ ತಕ್ಷಣವೇ ಅವರನ್ನು ಪತ್ತೆಹಚ್ಚಲು ಎಲ್ಲಾ ಕಡೆ ತಾಂತ್ರಿಕ ಕಾವಲು ಮಾಡಲು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ವ್ಯಾಪಾರೋದ್ಯಮಕ್ಕೆಬೆಂಬಲ; 1991ರಲ್ಲಿ ನಡೆದ ಘಟನೆಯಿಂದ ದಾವಣಗೆರೆಯಲ್ಲಿನ ವ್ಯಾಪಾರ ಕುಂಟಿತವಾಯಿತು. ಇದರಿಂದ ಚೇತರಿಸಿಕೊಳ್ಳಲು ಸಾಕಷ್ಟು ವರ್ಷಗಳೇ ಬೇಕಾಯಿತು.ಆದ್ದರಿಂದಬೃಹತ್ ಎಪಿಎಂಸಿ ಹೊಂದಿದ್ದು ವ್ಯಾಪಾರ ವಹಿವಾಟು ಹೆಚ್ಚಿಸಲು ಎಲ್ಲರೂ ಸೌಹಾರ್ದತೆಯಿಂದ ಇರಬೇಕು. ಯಾವುದೇ ಪಕ್ಷವಾಗಿರಲಿ ಸ್ನೇಹತ್ವದ ವಾತಾವರಣವಿರಬೇಕು ಮತ್ತು ಸ್ನೇಹದಿಂದಲೇ ಮನಗಳನ್ನು ಗೆಲ್ಲಬೇಕು. ಪ್ರಚೋದನಕಾರಿ ಹೇಳಿಕೆಗಳಿಗೆ ಯಾರು ಸಹ ಕಾನೂನು ಕೈಗೆತ್ತಿಕೊಳ್ಳುವ ಕೆಲಸ ಮಾಡಬಾರದು, ಇದಕ್ಕಾಗಿಯೇ ಪೊಲೀಸ್ ಇಲಾಖೆ ಇದ್ದು ಕಠಿಣ ಕ್ರಮ ಜರುಗಿಸಲಿದೆ ಎಂದು ತಿಳಿಸಿ ಮೆರವಣಿಗೆಗಳಲ್ಲಿ ಜಾನಪದ ಮೇಳಗಳು ಬಳಕೆ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಮಾತನಾಡಿ ಸಮಾಜದಲ್ಲಿ ಶಾಂತಿ ಕದಡುವುದರಿಂದ ಯಾರಿಗೂ ಲಾಭವಿಲ್ಲ, ಕಾನೂನು ಸುವ್ಯಸ್ಥೆಗೆ ಧಕ್ಕೆತರುವ ಯಾವುದೇ ವ್ಯಕ್ತಿಗಳಿದ್ದರೂ ನಿರ್ಧಾಕ್ಷೀಣ ಕ್ರಮ ಜರುಗಿಸಲು ಪೊಲೀಸ್ ಇಲಾಖೆಗೆ ಸಂಪೂರ್ಣ ಸಹಕಾರ ನೀಡಲಾಗುತ್ತದೆ ಎಂದರು. ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ಮೊನ್ನೆ ನಡೆದ ಘಟನೆಯಲ್ಲಿ ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗಿದೆ. 6 ಪ್ರಕರಣ ದಾಖಲು ಮಾಡಿ 50 ಜನರನ್ನು ಅರೆಸ್ಟ್ ಮಾಡಲಾಗಿದೆ, ಇನ್ನೂ ಕೆಲವರಿದ್ದು ಅವರಿಗಾಗಿ ಶೋಧನೆ ನಡೆದಿದ್ದು ಕರೆ ತಂದು ಬಂಧಿಸಲಾಗುತ್ತದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ 8 ಪ್ರಕರಣ ದಾಖಲಿಸಲಾಗಿದೆ. ಕೃತ್ಯದಲ್ಲಿ ಭಾಗಿಯಾದವರ ಮೇಲೆ ಕ್ರಮ ಕಟ್ಟಿಟ್ಟಬುತ್ತಿ, ಭಾಗಿಯಾಗದವರು ಯಾವುದೇ ಆತಂಕವಿಲ್ಲದೇ ಇರಬಹುದೆಂದರು.

## ಫಾಸ್ಟ್ ನ್ಯೂಸ್

### ಅಂಚೆ ಸೇವಾ ಸೌಲಭ್ಯಗಳ ಸದುಪಯೋಗಕ್ಕೆ ಮುಂದಾಗಬೇಕು: ಉಷಾ




» **ಚಳ್ಳಕೆರೆ**

ಗ್ರಾಮೀಣ ಭಾಗದ ಜನರಿಗೆ ಅಂಚೆ ಇಲಾಖೆ ವಿವಿಧ ರೀತಿಯ ಸೌಲಭ್ಯಗಳನ್ನು ನೀಡುತ್ತಿದ್ದು, ಇವುಗಳ ಸದುಪಯೋಗವನ್ನು ಗ್ರಾಮೀಣ ಭಾಗದ ಜನರು ಹೆಚ್ಚು ಪಡೆದು ಅಭಿವೃದ್ಧಿಯತ್ತ ನಡೆಯಬೇಕೆಂದು ಜಿಲ್ಲಾ ಅಂಚೆ ಅಧೀಕ್ಷಕಿ ಎಚ್.ಆರ್.ಉಷಾ ತಿಳಿಸಿದರು. ಅವರು, ಬುಧವಾರ ನಗರಂಗೆರೆ ಗ್ರಾಮದ ಅಂಚೆ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಜನಸಂಪರ್ಕ ಅಭಿಯಾನ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಬೇರೆ ಇಲಾಖೆಗಳಿಗಿಂತ ವಿಭಿನ್ನವಾಗಿ ಅಂಚೆ ಇಲಾಖೆ ಕಾರ್ಯನಿರ್ವಹಿಸುತ್ತಿದೆ. ದಕ್ಷತೆ, ಪ್ರಾಮಾಣಿಕತೆ, ನಂಬಿಕೆ, ವಿಶ್ವಾಸಕ್ಕೆ ಅಂಚೆ ಇಲಾಖೆ ಹೆಸರುವಾಸಿ. ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಸರ್ಕಾರ ಯೋಜನೆಗಳಿಗೆ ದಾಖಲಾತಿಗಳನ್ನು ಒದಗಿಸಲು ಸಾಧ್ಯವಾಗದ ಸಂದರ್ಭವೂ ಹೆಚ್ಚು. ಇಂತಹ ಸಂದರ್ಭದಲ್ಲಿ ಅಂಚೆ ಇಲಾಖೆ ಆಧಾರ ಕಾರ್ಡ್ ಸೇರಿದಂತೆ ಹಲವಾರು ಸೇವಾ ಕಾರ್ಯಗಳನ್ನು ಗ್ರಾಮೀಣ ಭಾಗದಲ್ಲಿ ಹಮ್ಮಿಕೊಂಡಿದೆ. ಸಾರ್ವಜನಿಕ ಸೇವಾ ಚಟುವಟಿಕೆಗಳನ್ನು ನಿರಂತರವಾಗಿ ನಡೆಸುವಲ್ಲಿ ಇಲಾಖೆ ಸದಾ ಮುಂದು ಎಂದರು. ಅಂಚೆ ನಿರೀಕ್ಷಕ ಪಿ.ಮಂಜುನಾಥ ಮಾತನಾಡಿ, ತಾಲ್ಲೂಕಿನಾದ್ಯಂತ ಇಲಾಖೆಯಿಂದ ಜನಸಂಪರ್ಕ ಅಭಿಯಾನವನ್ನು ಪ್ರತಿತಿಂಗಳು ಮಾಡಲಾಗುತ್ತಿದೆ. ಇಂದಿನ ಅಭಿಯಾನಕ್ಕೆ ಗ್ರಾಮೀಣ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಇಲಾಖೆ ಕಾರ್ಯಚಟುವಟಿಕೆಗಳ ಬಗ್ಗೆ ಆಸಕ್ತಿಯಿಂದ ಮಾಹಿತಿ ಪಡೆದಿದ್ದಾರೆ. ಅಂಚೆ ಇಲಾಖೆ ತನ್ನದೇಯಾದ ಪ್ರಾಮಾಣಿಕ ಸೇವೆಯಿಂದ ಜನರ ವಿಶ್ವಾಸಗಳಿಸುವಲ್ಲಿ ಯಶಸ್ವಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಿಎಲ್‌ಒ ಶರೀಫ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮಂಜುಳಾ, ಸದಸ್ಯ ಎನ್.ಮಂಜುನಾಥ, ಅಂಚೆನೌಕರರ ಸಂಘದ ಅಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ, ಕಾರ್ಯದರ್ಶಿ ಪಾಂಡುರಂಗರೆಡ್ಡಿ, ಅಂಚೆ ಮೇಲ್ವಿಚಾರಕ ರಾಘವೇಂದ್ರ, ಮೈಲನಹಳ್ಳಿನಾಗರಾಜ, ರಾಧಿಕ, ರಾಹುಲ್, ಮುರುಳಿ, ಶ್ರಾವಣಿ ಮುಂತಾದವರು ಉಪಸ್ಥಿತರಿದ್ದರು.

### ಪಿಡಿಓ ಧರಣಿ ಸತ್ಯಾಗ್ರಹ ಇಂದಿನಿಂದ ಆರಂಭ



» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ನಿರಂತರ ಸೇವೆ ನಿರ್ವಹಿಸುವ ಗ್ರಾಮ ಆಡಳಿತಾಧಿಕಾರಿಗಳು ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಕೆಲಸದ ಒತ್ತಡದಿಂದ ಗ್ರಾಮ ಆಡಳಿತಾಧಿಕಾರಿಗಳು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಸರ್ಕಾರ ಒಟ್ಟು 17 ವೆಬ್‌ಸೆಟ್‌ಗಳಲ್ಲಿ ಕಾರ್ಯನಿರ್ವಹಿಸುವ ಅನಿವಾರ್ಯತೆ ಉಂಟಾಗಿದೆ. ಆದ್ದರಿಂದ ರಾಜ್ಯ ಸಂಘದ ಸೂಚನೆ ಮೇರೆಗೆ ಸೆ.26ರಿಂದ ಅನಿರ್ಧಿಷ್ಟಾಕಾಲ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘದ ಅಧ್ಯಕ್ಷ ಎಂ.ಪ್ರಕಾಶ್ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ, ಸರ್ಕಾರಕ್ಕೆ ಹಲವಾರು ಬಾರಿ ಗ್ರಾಮ ಆಡಳಿತಾಧಿಕಾರಿಗಳ ಸೇವೆಯ ಬಗ್ಗೆ ಮನವಿ ಮಾಡಿದ್ದರೂ ಸರ್ಕಾರ ಮಾತ್ರ ಯಾವುದೇ ಸೌಲಭ್ಯ ನೀಡದೆ ನಿರ್ಲಕ್ಷ್ಯ ವಹಿಸಿದೆ. ವಿಶೇಷವಾಗಿ ಗ್ರಾಮ ಆಡಳಿತಾಧಿಕಾರಿಗಳು ಹಲವಾರು ರೀತಿಯಲ್ಲಿ ಕಂದಾಯ ಇಲಾಖೆ ದಾಖಲಾತಿಯನ್ನು ಸಿದ್ದಪಡಿಸುವ ಅಧಿಕಾರ ಹೊಂದಿದ್ದಾರೆ. ಯಾವುದೇ ಸಂದರ್ಭದಲ್ಲಿ ಕೆಲಸ ನಿರ್ವಹಿಸದೆ ನೆಮ್ಮದಿಯಿಂದ ಬದುಕಲು ಸಾಧ್ಯವಾಗುತ್ತಿಲ್ಲ, ಪ್ರತಿನಿತ್ಯ ಒತ್ತಡದಿಂದ ಕಾರ್ಯನಿರ್ವಹಿಸುವ ಸ್ಥಿತಿ ನಿರ್ಮಾಣವಾಗಿದೆ. ಇದನ್ನು ವಿರೋಧಿಸಿ ಪ್ರತಿಭಟನೆ ನಡೆಸಲಾಗುವುದು ಎಂದರು. ಗೌರವಾಧ್ಯಕ್ಷ ಆರ್.ರಂಗಸ್ವಾಮಿ ಮಾತನಾಡಿ, ತಾಲ್ಲೂಕಿನಲ್ಲಿ ಒಟ್ಟು 100ಕ್ಕೂ ಹೆಚ್ಚು ಗ್ರಾಮ ಆಡಳಿತಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಹಲವಾರು ಯೋಜನೆ ಹಾಗೂ ಸೌಲಭ್ಯವನ್ನು ಜನರಿಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ. ಪ್ರತಿಯೊಂದು ಹಂತದಲ್ಲೂ ಸಮಸ್ಯೆಗಳನ್ನು ಎದುರಿಸಿ ಹೋರಾಡುವ ಸ್ಥಿತಿ ಉಂಟಾಗಿದೆ. ಸರ್ಕಾರ ಮಾತ್ರ ಯಾವುದೇ ಸೌಲಭ್ಯ ನೀಡದೆ ಗ್ರಾಮ ಆಡಳಿತಾಧಿಕಾರಿಗಳಿಂದ ಹೆಚ್ಚು ಸೇವೆ ನಿರೀಕ್ಷೆ ಮಾಡುತ್ತಿದೆ. ಆದ್ದರಿಂದ ರಾಜ್ಯ ಸಂಘದ ಸೂಚನೆ ಮೇರೆಗೆ ಸೆ. 26ರಿಂದ ಅನಿರ್ಧಿಷ್ಟಾವಧಿ ಮುಷ್ಕರವನ್ನು ನಡೆಸಲಾಗುವುದು. ಈಗಾಗಲೇ ತಾಲ್ಲೂಕಿನಾದ್ಯಂತ ಎಲ್ಲರಿಗೂ ಮಾಹಿತಿ ನೀಡಿದ್ದು, ಸೆ.26ರ ಬೆಳಗ್ಗೆ 9.30ಕ್ಕೆ ತಾಲ್ಲೂಕು ಕಚೇರಿ ಮುಂಭಾಗಕ್ಕೆ ತಪ್ಪದೆ ಆಗಮಿಸುವಂತೆ ಮನವಿ ಮಾಡಲಾಗಿದೆ ಎಂದರು.

---

**ಸಂಸದರ ಚೊಚ್ಚಲ ದಿಶಾ ಸಭೆ: ಜಿಲ್ಲೆಯ ಅಭಿವೃದ್ಧಿಗೆ ಅಧಿಕಾರಿಗಳಿಂದ ಮೂಡಲಿ ಸೃಜನಾತ್ಮಕ, ಕ್ರಿಯಾತ್ಮಕ ಆಲೋಚನೆಗಳು, ಜಿಲ್ಲೆಯ ಅಭಿವೃದ್ಧಿ ಮತ್ತು ಬ್ರಾಂಡ್ ದಾವಣಗೆರೆಗೆ ಸದಾಬದ್ಧ; ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್**

# ಮಹಿಳೆಯರ ಸುರಕ್ಷತೆಗೆ ಹೆಚ್ಚಲಿ ಸಿಸಿ ಕಣ್ಗಾವಲು




» **ದಾವಣಗೆರೆ**

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಮಹಿಳಾ ರಕ್ಷಣೆಗೆ ಮೊದಲ ಆದ್ಯತೆಯಾಗಿದ್ದು ಮಹಿಳೆಯರ ರಕ್ಷಣೆಗೆ ಸಿಸಿಟಿವಿ ಕ್ಯಾಮೆರಾಗಳ ಜೊತೆಗೆ ದುರ್ಗಾಪಡೆ ಹೆಚ್ಚಿಸಬೇಕೆಂದು ಸಂಸದರಾದ ಡಾ;ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಬುಧವಾರ (ಸೆ.25) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಮೊದಲ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ದಿಶಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜನರು ಶಾಂತಿ, ನೆಮ್ಮದಿಯಿಂದಿರಲು ಕಾನೂನು ಸುವ್ಯವಸ್ಥೆ ಚನ್ನಾಗಿರಬೇಕು. ವೈದ್ಯರು, ಮಹಿಳೆಯರು ಹಾಗೂ ಸಾರ್ವಜನಿಕರ ಸುರಕ್ಷತೆ ಬಹಳ ಮುಖ್ಯವಾಗಿದ್ದು ಇದಕ್ಕಾಗಿ ದಾವಣಗೆರೆ ನಗರ ಸೇರಿದಂತೆ ಜಿಲ್ಲೆಯ ಎಲ್ಲಾ ನಗರ, ಪಟ್ಟಣಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಹೆಚ್ಚು ಅಳವಡಿಸಬೇಕು.

ಮುಂದಿನ ದಿನಗಳಲ್ಲಿ ದಸರಾ ಹಬ್ಬ ಸೇರಿದಂತೆ ಅನೇಕ ಕಡೆ ಗಣೇಶಮೂರ್ತಿ ವಿಸರ್ಜನೆ ಇರುವುದರಿಂದ ಹೆಚ್ಚಿನ ನಿಗಾವಹಿಸಬೇಕು. ಕೆಲವು ಗ್ರಾಮೀಣ ಭಾಗದಲ್ಲಿ ಮನೆಯಿಂದ ಹೋದ ಒಂದು ಗಂಟೆಯಲ್ಲಿ ಕಳ್ಳತನ ಮಾಡಲಾಗಿದೆ ಎಂಬ ವರದಿಯಾಗಿದೆ. ಇದಾಗದಂತೆ ತಡೆಗಟ್ಟುವ ಮೂಲಕ ಮಹಿಳೆಯರ ಸರಗಳ್ಳತನ, ಮಹಿಳೆಯರು ಒಂಟಿಯಾಗಿ ಹೋಗುವಾಗ ಬೆದರಿಕೆ ಒಡ್ಡುವವರ ಮೇಲೆ ನಿಗಾವಹಿಸಲು ಕ್ಯಾಮೆರಾಗಳನ್ನು ಹೆಚ್ಚಳ ಮಾಡಲು ತಿಳಿಸಿ ಇದಕ್ಕಾಗಿ ಅಗತ್ಯವಿರುವ ಅನುದಾನದ ಅವಕಾಶ ಮಾಡಿಕೊಳ್ಳಲು ತಿಳಿಸಿದರು.

ವೈದ್ಯರ ಹಾಗೂ ಮಹಿಳಾ ವೈದ್ಯರ ಸುರಕ್ಷತೆಗಾಗಿ ಚಿಗಟೇರಿ ಆಸ್ಪತ್ರೆ ಸೇರಿದಂತೆ ಅಗತ್ಯವಿರುವ ಕಡೆ ಸಿಸಿ ಕ್ಯಾಮೆರಾ ಅಳವಡಿಸಬೇಕು. ರಾತ್ರಿವೇಳೆ ಚಿಗಟೇರಿ ಆಸ್ಪತ್ರೆಯಲ್ಲಿ ಹೆಚ್ಚಿನ ಬಂದೋಬಸ್ತ್ ವ್ಯವಸ್ಥೆ ಮಾಡಲು ತಿಳಿಸಿ ಈ ಬಗ್ಗೆ ಜಿಲ್ಲಾ ರಕ್ಷಣಾಧಿಕಾರಿಗಳು ಕ್ರಮವಹಿಸಬೇಕೆಂದರು. .

ಜನಸ್ನೇಹಿ ಇಲಾಖೆಗಳಾಗಲಿ; ಸಾರ್ವಜನಿಕರು ವಿವಿಧ ಕೆಲಸಗಳಿಗಾಗಿ ಸರ್ಕಾರಿ ಇಲಾಖೆಗಳಿಗೆ ಆಗಮಿಸಲಿದ್ದು ಬರುವ ಸಾರ್ವಜನಿಕರಿಗೆ ಕುಡಿಯುವ ನೀರಿನವ್ಯವಸ್ಥೆಜೊತೆಗೆಅಲ್ಲಿಸಾರ್ವಜನಿಕರು ಶೌಚಾಲಯಗಳ ಬಳಕೆಗೆ ಅವಕಾಶ ಮಾಡಿಕೊಟ್ಟು ಇವುಗಳ ನಿರ್ವಹಣೆ ಮಾಡಬೇಕು. ಸರ್ಕಾರಿ ಇಲಾಖೆಗಳಿಗೆ ಬರುವ ಸಾರ್ವಜನಿಕರೊಂದಿಗೆ ಸೌಜನ್ಯಯುತವಾಗಿ ವರ್ತಿಸುವ ಮೂಲಕ ಅವರಿಗೆ ಬೇಕಾಗಿರುವ ಮಾಹಿತಿಯನ್ನು ನೀಡುವ ಮೂಲಕ ಸಂಕಷ್ಟದಲ್ಲಿದ್ದಲ್ಲಿ ಅವರಿಗೆ ಸಿಗಬಹುದಾದ ಯೋಜನೆಗಳ ಮಾಹಿತಿಯನ್ನು ನೀಡಬೇಕು. ಇಲಾಖೆಗಳಿಗೆ ಭೇಟಿ ನೀಡಿದ ಸಾರ್ವಜನಿಕರು ಅರ್ಹರಿದ್ದಲ್ಲೂ ಸೌಲಭ್ಯಕ್ಕಾಗಿ ಜನಪ್ರತಿನಿಧಿಗಳ ಬಳಿ ಬರುವಂತಾಗಬಾರದು ಎಂದರು.

ಪಶುಸಂಗೋಪನಾ ಚಿಕಿತ್ಸಾ ಸೌಲಭ್ಯ ಹೆಚ್ಚಳಕ್ಕೆ ಸೂಚನೆ; ಜಿಲ್ಲೆಯು ಹೈನುಗಾರಿಕೆಯಲ್ಲಿಯು ಮುಂದಿದ್ದು ಹಸು, ಎಮ್ಮೆ, ಕುರಿಗಳ ಸಾಕಾಣಿಕೆ ಮಾಡುತ್ತಿದ್ದಾರೆ. ಜಾನುವಾರುಗಳು ವಿವಿಧ ಖಾಯಿಲೆಗಳಿಗೆ ತುತ್ತಾದಾಗ ಚಿಕಿತ್ಸೆಗಾಗಿ ದೂರದ ಊರುಗಳಿಗೆ ಹೋಗಬೇಕಾದ ಸ್ಥಿತಿ ಇದೆ ಎಂದು ಜನರು ಕೇಳುತ್ತಿದ್ದಾರೆ. ಇದಕ್ಕಾಗಿ ಜಿಲ್ಲೆಯಲ್ಲಿನ 153 ಪಶು ಚಿಕಿತ್ಸಾಲಯಗಳಲ್ಲಿ ಇರುವ ಸಿಬ್ಬಂದಿಗಳಿಗೆ ತರಬೇತಿ ನೀಡುವುದು ಮತ್ತು ಮೈತ್ರಿ, ಪಶುಸಖಿಗಳಿಗೆ ತರಬೇತಿ ಕೊಡಿಸಿ ರೈತರ ಜಾನುವಾರುಗಳ ಚಿಕಿತ್ಸೆಗೆ ಕ್ರಮ ವಹಿಸಲು ಪಶುಸಂಗೋಪನಾ ಇಲಾಖೆ ಅಧಿಕಾರಿಗೆ ಸೂಚನೆ ನೀಡಿದರು.

ಸಂಸದರ ಆದರ್ಶಗ್ರಾಮ ಆಯ್ಕೆ ಮಾಡಲು ಸೂಚನೆ; ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳಲ್ಲಿ ಒಂದು ಗ್ರಾಮವನ್ನು ಸಂಸದರ ಆದರ್ಶ ಗ್ರಾಮವನ್ನಾಗಿ ಆಯ್ಕೆ ಮಾಡಬೇಕು. ಈ ಗ್ರಾಮ ಹೆಚ್ಚು ಜನಸಂಖ್ಯೆಯಿಂದ ಕೂಡಿದ್ದು ಇಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರಬೇಕು. ಅಂತಹ ಗ್ರಾಮ ಆಯ್ಕೆ ಮಾಡಬೇಕು, ಈ ಸಂಸದರ ಆದರ್ಶಗ್ರಾಮ ಯೋಜನೆಗೆ ಯಾವುದೇ ಪ್ರತ್ಯೇಕ ಅನುದಾನ ಇರುವುದಿಲ್ಲ. ಇರುವ ಯೋಜನೆಗಳನ್ನೆ ಬಳಕೆ ಮಾಡಿಕೊಂಡು ಅಲ್ಲಿ ಎಲ್ಲಾ ವಲಯಗಳಲ್ಲಿ ಅಭಿವೃದ್ಧಿ ಮಾಡುವುದೇ ಇದರ ವಿಶೇಷವಾಗಿದೆ ಎಂದರು.

ಶುದ್ಧ ಕುಡಿಯುವ ನೀರು ಪೂರೈಸಿ; ಗ್ರಾಮೀಣ ಭಾಗ ಸೇರಿದಂತೆ ನಗರ, ಪಟ್ಟಣ ಪ್ರದೇಶದಲ್ಲಿನ ಓವರ್‌ಹೆಡ್ ಟ್ಯಾಂಕ್‌ಗಳ ಸ್ವಚ್ಛತೆಮಾಡಿಕ್ಲೋರಿನೇಷನ್‌ಮಾಡಿ,ಪೈಪ್ ಒಡೆದು ನೀರು ಸೋರಿಕೆಯಾಗುತಿದ್ದಲ್ಲಿ ಅದನ್ನು ಸರಿಪಡಿಸಿ ಆಗಿಂದಾಗ್ಗೆ ನೀರಿನ ಪರೀಕ್ಷೆ ಮಾಡಿಸಬೇಕು. ಹೊನ್ನಾಳಿ ತಾ; ಕತ್ತಿಗೆ ಗ್ರಾಮಕ್ಕೆ ಹೋದಾಗ ಅಲ್ಲಿನ ಜನರು ಪ್ಲೋರೈಡ್ ಅಂಶಹೆಚ್ಚಿದ್ದರಿಂದಕುಡಿಯುವ ನೀರಿನ ತೊಂದರೆಯಾಗಿದೆ ಎಂದು ನನ್ನ ಗಮನಕ್ಕೆ ತಂದಿದ್ದಾರೆ ಎಂದಾಗ ಸಿಇಓ ಅವರು ಶುದ್ದ ಕುಡಿಯುವ ನೀರಿನ ಘಟಕ ಈ ಗ್ರಾಮಕ್ಕೆ ನೀಡಲಾಗುತ್ತದೆ ಎಂದರು.

ವಿದ್ಯಾರ್ಥಿ ಸಾಲ, ಪಿಂಚಣಿ ಹಣ ಸಾಲಕ್ಕೆ ಮುರಿದುಕೊಳ್ಳದಿರಲು ಸೂಚನೆ; ಪ್ರತಿಭಾನ್ವಿತ ವಿದ್ಯಾರ್ಥಿಗಳು ವೃತ್ತಿಪರ ಕೋರ್ಸ್‌ಗಳ ವ್ಯಾಸಂಗಕ್ಕೆ ಹೋಗಲು ಬ್ಯಾಂಕ್‌ಗಳಿಂದ ಯಾವುದೇ ಷರತ್ತುಗಳಿಲ್ಲದೇ ಶೈಕ್ಷಣಿಕ ಸಾಲ ಕೊಡಬೇಕು. ಆದರೆ ಕೆಲವು ಬ್ಯಾಂಕ್‌ಗಳು ಇಂತಹ ಪ್ರತಿಭಾನ್ವಿತ ಬಡ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಲವನ್ನೆ ನೀಡುವುದಿಲ್ಲ. ಬಾಪೂಜಿಯಲ್ಲಿ ಅಂತಿಮ ವರ್ಷದಲ್ಲಿ ಬಿಇ ಓದುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿನಿಗೆ ತಂದೆ, ತಾಯಿ ಇಲ್ಲ, ಈ ವಿದ್ಯಾರ್ಥಿನಿ ಪ್ರವೇಶ ಕೈಬಿಟ್ಟು ಹೋದಂತಹ ವಿಷಯ ಕೇಳಿದಾಗ ನೋವುಂಟಾಯಿತು. ಈ ನಿಟ್ಟಿನಲ್ಲಿ ಶೈಕ್ಷಣಿಕ ಸಾಲ ನೀಡಲು ಬ್ಯಾಂಕ್ ಅಧಿಕಾರಿಗಳಿಗೆ ಲೀಡ್ ಬ್ಯಾಂಕ್‌ನಿಂದ ಸರಿಯಾದ ನಿರ್ದೇಶನ ನೀಡಲು ತಿಳಿಸಿದರು.

ವಿವಿಧ ಸಾಮಾಜಿಕ ಭದ್ರತಾ ಯೋಜನೆಯಡಿ ಮಾಸಾಶನ ನೀಡಲಾಗುತ್ತಿದೆ, ಆದರೆ ಬ್ಯಾಂಕ್‌ನವರು ಅವರ ಸಾಲಕ್ಕೆ ಮುರಿದುಕೊಳ್ಳುತ್ತಿದ್ದಾರೆ ಎಂಬ ಸಾಕಷ್ಟು ದೂರುಗಳಿವೆ. ಮಾಸಾಶನವನ್ನು ಅವರ ಜೀವನ ನಿರ್ವಹಣೆಗಾಗಿ ಸರ್ಕಾರ ಸಾಮಾಜಿಕ ಭದ್ರತೆಗಾಗಿ ನೀಡುತ್ತಿದೆ. ಈ ಹಣವನ್ನು ಅವರ ಸಾಲಕ್ಕೆ ಜಮಾ ಮಾಡಿಕೊಳ್ಳುವ ಕ್ರಮ ಸರಿಯಲ್ಲ ಎಂದಾಗ ಜಿಲ್ಲಾಧಿಕಾರಿಯವರು ಸಾಲಕ್ಕೆ ಮುರಿದುಕೊಂಡ ಓರ್ವ ಶಾಖೆಯ ಬ್ಯಾಂಕ್ ಮ್ಯಾನೇಜರ್ ಮೇಲೆ ಆರ್.ಬಿ.ಐ.ಗೆ ವರದಿ ಮಾಡಲಾಗಿದೆ ಎಂದರು.

ಗುಣಾತ್ಮಕ ಕಾಮಗಾರಿ, ಪಾರದರ್ಶಕತೆಗೆ ಒತ್ತು; ವಿವಿಧ ಇಲಾಖೆಗಳಿಂದ ಕೈಗೊಳ್ಳಲಾಗುವ ಅಭಿವೃದ್ಧಿ ಕಾಮಗಾರಿಗಳು ಗುಣಾತ್ಮಕವಾಗಿರಬೇಕು. ಮತ್ತು ಟೆಂಡರ್‌ನಲ್ಲಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳಬೇಕು, ಯಾವುದೇ ಕಾರಣಕ್ಕೂ ಕಳಪೆ ಕಾಮಗಾರಿಗ ಳಾಗಬಾರದು. ಸಾರ್ವಜನಿಕರು ಸಮಸ್ಯೆ ತರುವಂತಿರಬಾರದು. ಪ್ರತಿ ತ್ರೈಮಾಸಿಕದಲ್ಲಿ ದಿಶಾ ಸಭೆ ನಡೆಸಿ ಕೇಂದ್ರ ಪುರಸ್ಕೃತ ಯೋಜನೆಗಳ ಸಮಗ್ರವಾಗಿ ಪರಿಶೀಲನೆ ನಡೆಸಲಾಗುತ್ತದೆ. ಅಧಿಕಾರಿಗಳು, ಜನಪ್ರತಿನಿಧಿಗಳು ಒಂದು ಕುಟುಂಬದಂತೆ ಕೆಲಸ ಮಾಡಿ ಜನರ ಕಷ್ಟಗಳಿಗೆ ಸ್ಪಂದಿಸಿದಾಗ ಜನರು ನೆಮ್ಮದಿಯಿಂದಿರಲು ಸಾಧ್ಯ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

## 7ನೇ ವೇತನ ಆಯೋಗ ಜಾರಿಯಲ್ಲಿ ನಿವೃತ್ತ ನೌಕರರಿಗೆ ಅನ್ಯಾಯ: ಸರ್ಕಾರ ವಿರುದ್ದ ಪ್ರತಿಭಟನೆಗೆ ಸಂಘ ಸಜ್ಜು



» **ಚಳ್ಳಕೆರೆ**

ರಾಜ್ಯ ಸರ್ಕಾರ 1 ಆಗಸ್ಟ್ 2024ರಿಂದ 7ನೇ ವೇತನ ಆಯೋಗವನ್ನು ಅಧಿಕೃತವಾಗಿ ಜಾರಿಗೊಳಿಸಿರುವುದಾಗಿ ಪ್ರಕಟಿಸಿದೆ. ನಿವೃತ್ತ ನೌಕರರಿಗೂ ಇದು ಅನ್ವಯವಾದರೂ ಕಳೆದ 1 ಜುಲೈ 2022ರಿಂದ 31 ಜುಲೈ2024ರ ಅವಧಿಯಲ್ಲಿ ನಿವೃತ್ತರಾದವರಿಗೂ ಈ ಸೌಲಭ್ಯವನ್ನು ಸರ್ಕಾರ ನೀಡಬೇಕೆಂದು ನಿವೃತ್ತ ನೌಕರರ ಸಂಘದ ರಾಜ್ಯ ಸಂಚಾಲಕ ಎಚ್.ಗೋವಿಂದಯ್ಯ ಒತ್ತಾಯಿಸಿದರು.

ಅವರು, ನಗರದ ಸರ್ಕಾರಿ ನೌಕರರ ಭವನದಲ್ಲಿ ತಾಲ್ಲೂಕುನಿವೃತ್ತ ನೌಕರರ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಈ ಅವಧಿಯಲ್ಲಿ ನಿವೃತ್ತರಾದ ನೌಕರರ ಸರ್ಕಾರದಿಂದ ಆರ್ಥಿಕ ನೆರವು ಕೊಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಪ್ರವಾಸಕೈಗೊಂಡು ನಿವೃತ್ತ ನೌಕರರ ಸಮಸ್ಯೆಗಳ ಬಗ್ಗೆ ಅಧ್ಯಯನ ನಡೆಸಿ ಮನವರಿಕೆ ಮಾಡಿಕೊಡಲಾಗುವುದು. ಸರ್ಕಾರ ನಮ್ಮ ಮನವಿಯನ್ನು ಪುರಸ್ಕರಿಸದೇ ತಿರಸ್ಕರಿಸಿದಲ್ಲಿ ಸರ್ಕಾರದ ವಿರುದ್ದ ಅ.01ರಂದು ಆಯೋಜಿಸಿರುವ ಹಿರಿಯನಾಗರೀಕರ ದಿನಾಚರಣೆ ಸಂದರ್ಭದಲ್ಲಿ ಕಪ್ಪುಪಟ್ಟಿ ಧರಿಸಿ ನಿವೃತ್ತ ನೌಕರರು ಸರ್ಕಾರ ವಿರುದ್ದ ಜಿಲ್ಲಾ ಮಟ್ಟದಲ್ಲಿ ಧರಣಿ ನಡೆಸಲಾಗುವುದು ಎಂದು ತಿಳಿಸಿದ ಅವರು, ಕೂಡಲೇ ಮುಖ್ಯಮಂತ್ರಿಗಳು ನಿವೃತ್ತ ನೌಕರರ ಸಮಸ್ಯೆ ಬಗೆಹರಿಸಬೇಕೆಂದು ಮನವಿ ಮಾಡಿದರು.

ಸಭೆಯ ಅಧ್ಯಕ್ಷತೆಯನ್ನು ತಾಲ್ಲೂಕು ಸಂಚಾಲಕ ಎಂ.ಜಿ.ಪ್ರಕಾಶ್ ವಹಿಸಿದ್ದರು. ಸಭೆಯಲ್ಲಿ ನಿವೃತ್ತ ಅಧಿಕಾರಿಗಳಾದ ಡಿ.ದಯಾನಂದ, ಮಂಜುನಾಥಚಾರ್, ಪಿ.ವಿ.ಕೃಷ್ಣಮೂರ್ತಿ,ಪಿ.ಮಾರಣ್ಣಮುಂತಾದವರು ಭಾಗವಹಿಸಿದ್ದರು.





ಚಳ್ಳಕೆರೆ ತಾಲ್ಲೂಕಿನ ಕಾಲುವೆಹಳ್ಳಿ ಗ್ರಾಮದಲ್ಲಿ ಬಡೆದ ಎಡೆ ಜಾತ್ರೆ ಹಿನ್ನೆಲೆಯಲ್ಲಿ ನೀಲಕಂಠೇಶ್ವರಸ್ವಾಮಿ ಪಲ್ಲಕ್ಕಿ ಮೆರವಣಿಗೆ ನಡೆಸಿದರು.

---

## ಪದವಿ ಜೊತೆ ಕೌಶಲ್ಯ ಶಿಕ್ಷಣ ಅಗತ್ಯ: ಕುಲಪತಿ ಪ್ರೊ.ಬಿ.ಡಿ.ಕುಂಬಾರ



» **ಚಿತ್ರದುರ್ಗ**

ಪದವಿ ಜೊತೆ ಕೌಶಲ್ಯ ಶಿಕ್ಷಣ ಪಡೆದುಕೊಂಡಾಗ ಮಾತ್ರ ಸ್ವ–ಉದ್ಯೋಗಿಗಳಾಗಿ ಸ್ವಾವಲಂಭಿ ಜೀವನ ನಡೆಸಲು ಸಾಧ್ಯ ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ ವಿದ್ಯಾರ್ಥಿಗಳಿಗೆ ಕರೆ ನೀಡಿದರು.ಬಿಟ್ಸ್ ಹೈಟೆಕ್ ಕಾಲೇಜು ವತಿಯಿಂದ ತ.ರಾ.ಸು.ರಂಗಮಂದಿರದಲ್ಲಿ ಇತ್ತೀಚೆಗೆ ನಡೆದ ಪದವಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈಗಿನ ವಿದ್ಯಾರ್ಥಿಗಳು ಕೇವಲ ಅಂಕಪಟ್ಟಿ ಪದವಿಗಷ್ಟೆ ಸೀಮಿತರಾಗಿದ್ದಾರೆ. ಕೌಶಲ್ಯ ಶಿಕ್ಷಣದ ಕಡೆ ಹೆಚ್ಚು ಗಮನ ಕೊಟ್ಟು ಸಾಫ್ಟ್‌ವೇರ್ ಕಂಪನಿಗಳನ್ನು ತೆರೆದು ಹತ್ತಾರು ನಿರುದ್ಯೋಗಿಗಳಿಗೆ ಉದ್ಯೋಗ ಕೊಡುವಂತ ಸಾಮರ್ಥ್ಯ ಬೆಳೆಸಿಕೊಳ್ಳಬೇಕು. ಪದವಿ ನಂತರ ಎಲ್ಲರೂ ಸರ್ಕಾರಿ ನೌಕರಿಗೆ ಕಾಯುವ ಬದಲು ಸ್ವ–ಉದ್ಯೋಗ ಆರಂಭಿಸುವುದರ ಕಡೆ ಮನಸ್ಸು ಮಾಡಿ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಅನೇಕ ಸವಲತ್ತುಗಳಿವೆ. ಎಲ್ಲವನ್ನು ಸದುಪಯೋಗಪಡಿಸಿಕೊಂಡು ಯಶಸ್ವಿ ಉದ್ಯಮಿಗಳಾಗಿ ಎಂದು ಪ್ರೊ.ಬಿ.ಡಿ.ಕುಂಬಾರ ಹಾರೈಸಿದರು.ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷ ಪ್ರೊ.ಎಸ್.ಆರ್.ನಿರಂಜನ, ಅಪರಾಧಶಾಸ್ತ್ರ ವಿಶ್ರಾಂತ ಪ್ರಾಧ್ಯಾಪಕ ಡಾ.ನಟರಾಜ್, ಸರ್ಕಾರಿ ವಿಜ್ಞಾನ ಕಾಲೇಜು ಗಣಿತ ಸ್ನಾತಕೋತ್ತರ ವಿಭಾಗದ ಸಹ ಪ್ರಾಧ್ಯಾಪಕ ಡಾ.ಗಟ್ಟಿ ಎನ್.ಬಿ. ಬಿಟ್ಸ್ ಹೈಟೆಕ್ ಕಾಲೇಜು ಸಂಸ್ಥಾಪಕ ರವೀಂದ್ರ ಕೆ.ಬಿ. ಪ್ರಾಂಶುಪಾಲರಾದ ಶ್ರೀಮತಿ ಕವಿತ ಜಿ.ಎಂ. ಕಾರ್ಯದರ್ಶಿ ಬಸಪ್ಪ ಕೆ.ಆರ್. ಇವರುಗಳು ವೇದಿಕೆಯಲ್ಲಿದ್ದರು.

---

**ಪ್ರಮುಖ ಸುದ್ದಿ**

# ಶಾಲೆ ಬಿಡುವ ಮಕ್ಕಳ ಸಂಖ್ಯೆ ಜಾಸ್ತಿ ಆಗಬಾರದು ಎಂಬ ಉದ್ದೇಶಕ್ಕೆ ಬಿಸಿಯೂಟ ಯೋಜನೆ ಜಾರಿಗೆ ತರಲಾಯಿತು

» **ಹೊಸದುರ್ಗ**

ಬಡವರ ಮಕ್ಕಳು ಸೇರಿದಂತೆ ಎಲ್ಲ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಶಾಲೆ ಬಿಡುವ ಮಕ್ಕಳ ಸಂಖ್ಯೆ ಜಾಸ್ತಿ ಆಗಬಾರದು ಎಂಬ ಉದ್ದೇಶಕ್ಕೆ ಬಿಸಿಯೂಟ ಯೋಜನೆ ಜಾರಿಗೆ ತರಲಾಯಿತು ಎಂದು ಶಾಸಕ ಬಿ. ಜಿ. ಗೋವಿಂದಪ್ಪ ಹೇಳಿದರು.

ತಾಲೂಕಿನ ಲಕ್ಕಿಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿದ್ದ ಪೂರಕ ಪೌಷ್ಟಿಕ ಆಹಾರ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಸಿದ್ದರಾಮಯ್ಯ ನೇತೃತ್ವದ ಕಾಂಗ್ರೇಸ್ ಸರಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ನೇರವಾಗುತ್ತಿದೆ, ಎಸ್ ಎಂ ಕೃಷ್ಣಸರಕಾರದ ಅವಧಿಯಲ್ಲಿ ಬಿಸಿಯೂಟ ಕಾರ್ಯಕ್ರಮವನ್ನು ಒಂದೆರೆಡು ಜಿಲ್ಲೆಗಳಲ್ಲಿ ಆರಂಭಿಸಲಾಯಿತು. ನಂತರ ಯೋಜನೆಯನ್ನು ರಾಜ್ಯವ್ಯಾಪ್ತಿ ವಿಸ್ತರಿಸಲಾಯಿತು.

ಅನೇಕ ಅಡೆ ತಡೆ ಬಂದುರೂ ಸಹಾ ಈ ಯೋಜನೆ ಯಶಸ್ವಿಯಾಗಿ ನಡೆಯುತ್ತಿದೆ.

ಮಕ್ಕಳು ದೈಹಿಕವಾಗಿ ಸದೃಢವಾಗಿದ್ದರೆ, ಶಿಕ್ಷಣ ಕಲಿಕೆ ಸದೃಡವಾಗುತ್ತಿದೆ, ರಾಜ್ಯ ಸರಕಾರ ಮಕ್ಕಳು ಪೌಷ್ಟಿಕವಾಗಿ ಸದೃಢವಾಗಿರಬೇಕೆಂಬ ಹಿನ್ನೆಲೆಯಲ್ಲಿ ಬಿಸಿಯೂಟ, ಮೊಟ್ಟೆ, ಬಾಳೆಹಣ್ಣು, ಹಾಲು ನೀಡುತ್ತಿದೆ.ಕಲಿಕೆಗೆ ಉತ್ತೇಜನ ನೀಡಲು ಉಚಿತ ಸಮವಸ್ತ್ರ, ಶು, ಸಾಕ್ಸ್, ನೀಡುತ್ತಿದೆ. ಈ ಮೂಲಕ ಮಕ್ಕಳ ಹಾಜರಾತಿ ಹೆಚ್ಚಿಸಿದೆ ಎಂದರು.

ಈಗಾಗಲೇ ವಾರದಲ್ಲಿ ಎರಡು ದಿನ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಬೇಯಿಸಿದ ಕೋಳಿ ಮೊಟ್ಟೆ, ಬಾಳೆಹಣ್ಣು ನೀಡಲಾಗುತಿತ್ತು. ಇಂದಿನಿಂದ ವಾರದ ಆರು ದಿನ ಕೋಳಿ ಮೊಟ್ಟೆಯನ್ನು ನೀಡಲಾಗುವುದು. ಮೊಟ್ಟೆ ಸೇವಿಸದ ಮಕ್ಕಳಿಗೆ ಶೇಂಗಾ ಚಿಕ್ಕಿ, ಬಾಳೆ ಹಣ್ಣು ನೀಡಲಾಗುವುದು ಎಂದರು.

ಈ ಸಂಧರ್ಬದಲ್ಲಿ ಬಿಇಓ ಸೈಯದ್ ಮೋಸಿನ್ ಅಕ್ಷರದಾಸೋಹದ ಸಹಾಯಕ ನಿರ್ದೇಶಕ ಶಾಂತಪ್ಪ, ಮುಖ್ಯ ಶಿಕ್ಷಕ ಪ್ರಕಾಶ್, ಹಾಗು ಸ್ಥಳಿಯ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T